ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 70 ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 ಚಿತ್ರದುರ್ಗ ದಿನಾಂಕ: 29–09–2024 ಭಾನುವಾರ ಪುಟ: 4 ಬೆಲೆ : ರೂ.2–00
Volume - 02 Issue - 70 RNI No: KARKAN/2023/88462 Chitradurga Date: 29-09-2024 Sunday Page: 4 Price: Rs. 2-00

ಒಳಪುಟದ ಸುದ್ದಿಗಳು

ಹಿಂದೂ ಮಹಾಗಣಪತಿ ಮೆರವಣಿಗೆಯಲ್ಲಿ ನಟ ದರ್ಶನ್ ಭಾವ ಚಿತ್ರದ ಪ್ರದರ್ಶನ 2

8000 ಕೋಟಿ ಅಕ್ರಮ: ನಿರ್ಮಲಾ ಸೇರಿ 5 ಮಂದಿ ವಿರುದ್ಧ ಎಫ್ ಐಆರ್ ದಾಖಲು 3

ರಾಜ್ಯ ರಾಜಕಾರಣದಲ್ಲಿ ಡಿಸೆಂಬರ್ ವೇಳೆಗೆ ಭಾರೀ ಸಂಚಲನ ಸಾಧ್ಯತೆ 4

ಸುದ್ದಿ, ಜಾಹಿರಾತಿಗೆ 9686622252

ಫಾಸ್ಟ್ ನ್ಯೂಸ್

ಡಿಜೆ ಸದ್ದಿಗೆ ಕುಣಿದು ಕುಪ್ಪಳಿಸಿದ ಯುವಕ, ಯುವತಿಯರು

ಡಿಜೆ ಸದ್ದಿಗೆ ಹೆಜ್ಜೆ ಹಾಕಿದ ಯುವಕರು ರಸ್ತೆಯುದ್ದಕ್ಕೂ ಜೈ ಶ್ರೀರಾಮ್, ಜೈ ಭಜರಂಗಿ ಎಂದು ಘೋಷ ವಾಕ್ಯ ಕೂಗುವ ಮೂಲಕ ಭರ್ಜರಿ ಸ್ಟೆಪ್ ಹಾಕಿದರು. ಅದೇ ರೀತಿ ಯುವಕರಿಗಿಂತ ನಾವೇನು ಕಮ್ಮಿ ಇಲ್ಲ ಎಂಬಂತೆ ಯುವತಿಯರು ಕೂಡ ಡಿಜೆ ಸದ್ದಿಗೆ ಸಖತ್ ಸ್ಟೆಪ್ ಹಾಕುವ ಮೂಲಕ ತಮ್ಮ ಸ್ನೇಹಿತೆಯರೊಂದಿಗೆ ಆಗಮಿಸಿ ಭರ್ಜರಿ ಎಂಜಾಯ್ ಮಾಡಿದರು.

ಒಂದು ವಾರದಿಂದ ಅಲಂಕಾರ ಭರ್ಜರಿ ಸಿದ್ಧತೆ

ಶೋಭಾಯಾತ್ರೆ ಹಿನ್ನೆಲೆಯಲ್ಲಿ ಕಳೆದ ಒಂದು ವಾರದಿಂದಲೇ ನಗರದ ಚಳ್ಳಕೆರೆ ರಸ್ತೆಯಿಂದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದವರೆಗೂ ವಿವಿಧ ವರ್ಣಗಳಲ್ಲಿ ಝಗ ಮಗಿಸುತ್ತಿರುವ ವೈವಿಧ್ಯಮಯ ವಿದ್ಯುತ್ ದೀಪಗಳು ಹಾಗೂ ಸಂಪೂರ್ಣ ಕೇಸರಿಯನ್ನೇ ಕೋಟೆನಗರಿ ಹೊದ್ದುಕೊಂಡು, ಭಕ್ತರನ್ನು ಕೈ ಬೀಸಿ ಕರೆದಿದ್ದು ಸುಮಾರು 3 ಲಕ್ಷ ಕ್ಕೂ ಹೆಚ್ಚು ಜನರು ಶೋಭಾಯಾತ್ರೆಯಲ್ಲಿ ಭಾಗವಹಿಸಿ ಹಿಂದೂ ಮಹಾಗಣಪನಿಗೆ ತಮ್ಮ ಭಕ್ತಿ ಸಮರ್ಪಿಸಿದರು. ಶೋಭಾಯಾತ್ರೆ ಸಾಗುವ ಮಾರ್ಗದುದ್ದಕ್ಕೂ ಓಂ ಶ್ರೀ ಆಂಜನೇಯ ಸ್ವಾಮಿ ಭಾವಚಿತ್ರದ ಬೃಹತ್ ಧ್ವಜಗಳು ಮತ್ತು ಗಾಂಧಿ ವೃತ್ತದಲ್ಲಿ ಸುಮಾರು 20 ಅಡಿ ಮೇಲ್ಭಾಗದಲ್ಲಿ ಪ್ರತಿಷ್ಠಾಪಿಸಿರುವ ಶ್ರೀರಾಮನ ಮೂರ್ತಿ ಜನರ ಗಮನ ಸೆಳೆಯುತ್ತಿತ್ತು.

ಮುಕ್ತಿ ಭಾವುಟ ಮತ್ತು ಹಾರಗಳ ಹರಾಜು ಪ್ರಕ್ರಿಯೆ

ದಕ್ಷಿಣ ಭಾರತದ ಗಮನ ಸೆಳೆದಿರುವ ಚಿತ್ರದುರ್ಗದ ಹಿಂದೂ ಮಹಾಗಣಪತಿ ಶೋಭಾಯಾತ್ರೆ ಆರಂಭವಾಗಿದ್ದು, ಲಕ್ಷಾಂತರ ಭಕ್ತರು ಭವ್ಯಕ್ಷಣಕ್ಕೆ ಸಾಕ್ಷಿಯಾಗಿದ್ದಾರೆ. ಪ್ರತಿ ವರ್ಷದ ಸಂಪ್ರದಾಯದಂತೆ ಈ ಬಾರಿಯೂ ದೇವರ ಮುಕ್ತಿ ಭಾವುಟ, ಹೂವಿನ ಹಾರ ಹರಾಜು ಹಾಕಲಾಯಿತು. ಮುಕ್ತಿ ಭಾವುಟವನ್ನು ಎನ್.ಜೆ.ಹಳ್ಳಿ ಮಂಜುನಾಥ್ ▯ 2.5 ಲಕ್ಷ, ಹೂವಿನ ಹಾರವನ್ನು ತೊರೆಕೋಲಮ್ಮನಹಳ್ಳಿ ತಿಪ್ಪೇಸ್ವಾಮಿ ▯ 1.60ಲಕ್ಷ, ನೋಟಿನ ಹಾರವನ್ನು ಕೆ.ಜಿ.ಟಿ.ಗುರುಮೂರ್ತಿ * 2.50 ಲಕ್ಷ, ಪುರಿ ಜಗನ್ನಾಥ ಮಂದಿರ ಪ್ರತಿಕೃತಿಯನ್ನು ಕೆ.ಸಿ.ನಾಗರಾಜ್ * 2.25 ಲಕ್ಷಕ್ಕೆ ಪಡೆದರು. ಇನ್ನೂ ಫಲಾಹಾರವನ್ನು ಉಮೇಶ್ ಕಾರಜೋಳ ▯ 61 ಸಾವಿರ, ಪ್ರಸಾದವನ್ನು ಶಾಮಿಯಾನ ಮೋಹನ್ ▯ 70 ಸಾವಿರ, ಗಣಪತಿ ಭಾವಚಿತ್ರವನ್ನು ಮಂಜಣ್ಣ ▯ 60 ಸಾವಿರ, ಮೆಕ್ಕೆಜೋಳದ ಹಾರವನ್ನು ವಿಶ್ವಬಂಧು ಕಲ್ಲೇಶ ▯ 40 ಸಾವಿರಕ್ಕೆ ಪಡೆದರು.

ಪೋಲಿಸ್ ಇಲಾಖೆ ಹೈ ಅಲರ್ಟ್

ಚಿತ್ರದುರ್ಗದಲ್ಲಿ ಪೊಲೀಸರು ಹೈ ಅಲರ್ಟ್ ಆಗಿದ್ದು ನಗರದಾದ್ಯಂತ ಪರಿಶೀಲನೆ ನಡೆಸುತ್ತಿದ್ದಾರೆ. ನಗರದಾದ್ಯಂತ 6 ತಂಡಗಳ ಬಾಂಬ್ ಸ್ಕ್ವಾಡ್ ಶ್ವಾನ ದಳದ ವತಿಯಿಂದ ಸೂಕ್ಷ್ಮ ಸ್ಥಳಗಳಾದ ಬಸ್ ನಿಲ್ದಾಣ, ಮಾಲ್, ಲಡ್ಜ್, ಸಿನಿಮಾ ಮಂದಿರ, ಪ್ರಮುಖ ಹೋಟೆಲ್, ಜನ ಜಂಗುಳಿ ಪ್ರದೇಶಗಳು ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಶ್ವಾನ ದಳ ಹಾಗೂ ಬಾಂಬ್ ಸ್ಕ್ವಾಡ್ ಜೊತೆ ಬೇಟಿ ನೀಡುತ್ತಿರುವ ಪೊಲೀಸರು ಅಪರಿಚಿತರು ತಂಗಿರುವ ಬಗ್ಗೆ ಹೊಸಬರ ಓಡಾಟದ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ. ನಗರದಲ್ಲಿಂದು ಹಿಂದೂ ಮಹಾ ಗಣಪತಿ ಶೋಭಾಯಾತ್ರೆ ಇದ್ದು ದಾವಣಗೆರೆ, ಶಿವಮೊಗ್ಗ, ನಾಗಮಂಗಳ ಸೇರಿದಂತೆ ಕೆಲ ಕಡೆ ಗಲಬೆಗಳು ಉಂಟಾಗಿದ್ದು ಈ ನಿಟ್ಟಿನಲ್ಲಿ ಒಟ್ಟು ಆರು ಜನರನ್ನೊಳಗೊಂಡ ಒಟ್ಟು 6 ತಂಡಗಳಿಂದ ನಗರದ ಪ್ರಮುಖ ಸ್ಥಳಗಳಲ್ಲಿ ಸಂಚಾರ ನಡೆಸುತ್ತಿದ್ದು ಪೊಲೀಸರು ಬಿಗಿ ಬಂದೋಬಸ್ತ್ ಹಾಕಲಾಗಿದ್ದು ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ಶೋಭಾಯಾತ್ರೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಸುಮಾರು 3500 ಪೊಲೀಸ್ ಸರ್ಪಗಾವಲು ಹಾಕಲಾಗಿತ್ತು. 10 ಕೆಎಸ್ ಆರ್ ಪಿ, 12 ಡಿಎಆರ್, 4 ಕ್ಯೂ ಆರ್ ಟಿ, ತಂಡಗಳನ್ನು ಬಳಸಿಕೊಳ್ಳಲಾಗಿದೆ. ಐಜಿಪಿ, ಎಸ್ಪಿ, 6 ಎಎಸ್ಪಿ, 16 ಡಿವೈಎಸ್ಪಿ ಸೇರಿ ಇಲಾಖೆ ಅಧಿಕಾರಿಗಳು ರಕ್ಷಣೆ ನೀಡಿದರು.

ನಮ್ಮ ನಿಮ್ಮ ಭೇಟಿ ಮುಂದಿನ ವರ್ಷ

ಹೋಗಿ ಬಾ ಗಣಪ

ಅದ್ದೂರಿ ಶೋಭಯಾತ್ರೆ, ಹಿಂದೂ ಮಹಾಗಣಪತಿ ವಿಸರ್ಜನೆ –ಡಿಜೆ ಸದ್ದಿನಲ್ಲಿ ಚಂದ್ರವಳ್ಳಿ ಕೆರೆ ಸೇರಿದ ಗಣಪತಿ

ಹಿಂದೂ ಮಹಾಗಣಪತಿ ವಿಸರ್ಜನೆ ಅಂಗವಾಗಿ ಇಂದು ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಹಿಂದೂ ಮಹಾಗಣಪತಿಗೆ ವಿಶೇಷ ಪೂಜೆ ಸಲ್ಲಿಸಿ ಉತ್ತಮ ಮಳೆಬೆಳೆಯಾಗಲಿ ಎಂದು ಪ್ರಾರ್ಥಿಸಿದರು.

» ನಮ್ಮಜನ ಸಮಾಚಾರ

ಚಿತ್ರದುರ್ಗ: ಕೋಟೆ ನಾಡು ಚಿತ್ರದುರ್ಗದ ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆ ಬಹಳ ಅದ್ದೂರಿಯಾಗಿ ನೆರವೇರಿತು.ನಗರದ ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗದಳದ ವತಿಯಿಂದ ಹಮ್ಮಿಕೊಂಡಿದ್ದ ಹಿಂದೂ ಮಹಾಗಣಪತಿ ವಿಸರ್ಜನಾ ಬೃಹತ್ ಶೋಭಾಯಾತ್ರೆ ಅದ್ದೂರಿಯಿಂದ ಜರುಗಿತು.

ಚಂದ್ರವಳ್ಳಿ ಕೆರೆಯಲ್ಲಿ ಗಣಪತಿ ವಿಸರ್ಜನೆ: ಶನಿವಾರ ಬೆಳಗ್ಗೆ 12ರ ಸುಮಾರಿಗೆ ವಿಜ್ಞಾನ ಕಾಲೇಜು ಮುಂಭಾಗದಿಂದ ಶುರುವಾದ ಗಣಪತಿ ವಿಸರ್ಜನಾ ಶೋಭಾಯಾತ್ರೆ ಮೂರು ಕಿಲೋಮೀಟರ್ ಸಾಗಿ, ಚಂದ್ರವಳ್ಳಿ ಕೆರೆಯಲ್ಲಿ ವಿಸರ್ಜನೆ ಗೊಳ್ಳಲಿದೆ. ಈ ಮೆರವಣಿಗೆಗೆ ನಿರೀಕ್ಷೆಗೂ ಮೀರಿ ಜನರು ಬಂದಿದ್ದರು. ಬಿಸಿಲನ್ನು ಲೆಕ್ಕಿಸದೆ ಜನರು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದ್ದು ಕಂಡು ಬಂದಿತ್ತು. ಪ್ರತಿಷ್ಠಾಪನೆ ಸ್ಥಳದಿಂದ ಗಣಪತಿ ಮೆರವಣಿಗೆ ಹೊರಟು ಮದಕರಿನಾಯಕನ ವೃತ್ತ, ಅಂಬೇಡ್ಕರ್ ವೃತ್ತ, ಗಾಂಧಿ ವೃತ್ತ, ಸಂಗೋಳ್ಳಿ ರಾಯಣ್ಣ ವೃತ್ತ ಹಾಗೂ ಕನಕ ವೃತ್ತದದ ಮೂಲಕ ಶೋಭಾಯಾತ್ರೆ ಸಾಗಿತು. ಈ ಮೆರವಣಿಗೆಯಲ್ಲಿ ವಾದ್ಯ ಗೋಷ್ಠಿ, ತಮಟೆ, ಡೋಲು, ಗೊಂಬೆ ಕುಣಿತ, ವೀರಗಾಸೆ ಈಗೆ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಮೆರುಗು ನೀಡಿದವು.

ಲಕ್ಷಾಂತರ ಜನರು ಸಾಗರೋಪಾದಿಯಲ್ಲಿ ಕಿಕ್ಕಿರಿದು ಮೆರವಣಿಗೆಯಲ್ಲಿ ಸೇರಿದ್ದರು. ಪ್ರವಾಸಿ ಮಂದಿರದಿಂದ ಮೆರವಣಿಗೆ ಮುಂದೆ ಬರುತ್ತಿದ್ದಂತೆ ಕಟ್ಟಡಗಳ ಮೇಲಿದ್ದ ಜನರ ಸಂಭ್ರಮ ಮುಗಿಲು ಮುಟ್ಟಿತ್ತು. ಎತ್ತ ತಿರುಗಿದರು ಸಹ ಜನವೋ, ಜನ. ಗಣಪತಿ ಮೆರವಣಿಗೆಗೆ ಇಷ್ಟು ಜನರು ಆಗಮಿಸುತ್ತಾರೆ ಎಂದು ಯಾರೂ ನಿರೀಕ್ಷಿಸಿರಲಿಲ್ಲ.

ಯುವಕ, ಯುವತಿಯರು, ಮಕ್ಕಳು, ಹಿರಿಯರು ಹೀಗೆ ಎಲ್ಲರೂ ಭವ್ಯ ಮೆರವಣಿಗೆಗೆ ಸಾಕ್ಷಿಯಾದರು.

ಕೇಸರಿ ಮಾಯವಾದ ದುರ್ಗ: ಗಣೇಶನ ಬೃಹತ್ ಶೋಭಾಯಾತ್ರೆಗೆ ಚಿತ್ರದುರ್ಗ ನಗರ ಕೇಸರಿ ಬಣ್ಣದ ಮಾಯಾವಾಗಿತ್ತು. ಎಲ್ಲಿ ಎತ್ತಾ ನೋಡಿ ಕಣ್ಣಾಡಿಸಿದರೂ ಕೇಸರಿ ಬಾವುಟ ಹಾರಾಟ ಕಾಣುತ್ತಿದ್ದವು. ನಗರದ ವೃತ್ತಗಳಿಗೆ ಬಣ್ಣ, ಬಣ್ಣದ ಅಲಂಕಾರ ಮಾಡಿದ್ದು ಎಲ್ಲರ ಗಮನ ಸೆಳೆಯಿತು. ಮದಕರಿನಾಯಕ ವೃತ್ತ, ಗಾಂಧಿ ವೃತ್ತ, ಸಂಗೋಳ್ಳಿ ರಾಯಣ್ಣ, ಕನಕ ಸರ್ಕಲ್ ಸೇರಿದಂತೆ ಮತ್ತಿತರರ ವೃತ್ತಗಳಿಗೆ ಅಲಂಕಾರ ಮಾಡಿದ್ದರು.

ಹೊರ ಜಿಲ್ಲೆಗಳಿಂದ ಆಗಮನ: ರಾಜ್ಯದಲ್ಲಿಯೇ ಹೆಸರುವಾಸಿಯಾಗಿರುವ ಚಿತ್ರದುರ್ಗದ ಹಿಂದೂ ಮಹಾಗಣಪತಿ ವಿಸರ್ಜನಾ ಶೋಭಾಯಾತ್ರೆಗೆ ದಾವಣಗೆರೆ, ಬಳ್ಳಾರಿ, ತುಮಕೂರು, ಬೆಂಗಳೂರು, ಚಿಕ್ಕಮಗಳೂರು ಸೇರಿದಂತೆ ನಾನಾ ಜಿಲ್ಲೆಗಳು ಹಾಗೂ ಹೊರ ರಾಜ್ಯಗಳಿಂದಲೂ ಭಕ್ತರು ಆಗಮಿಸಿದ್ದರು.

ನಾವೆಲ್ಲಾ ಹಿಂದೂ ಒಗ್ಗಟ್ಟಾಗಿ ಇರಬೇಕಿದೆ: ನೀರಜ್ ದೋನೆರಿಯಾ

» ನಮ್ಮಜನ ಸಮಾಚಾರ

ಚಿತ್ರದುರ್ಗ: ನಾವೆಲ್ಲಾ ಹಿಂದೂ ಒಗ್ಗಟ್ಟಾಗಿ ಇರಬೇಕಿದೆ. ಬಿಡಿ ಬಿಡಿಯಾದರೆ ಬಲವಿಲ್ಲ, ಇಂತಹ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ನಾವೆಲ್ಲಾ ಸಂಘಟನೆಯಾಗಬೇಕಿದೆ ಎಂದು ಭಂಜರಂಗ ದಳದ ರಾಷ್ಟ್ರೀಯ ಸಂಯೋಜಕ ನೀರಜ್ ದೋನೆರಿಯಾ ಕರೆ ನೀಡಿದ್ದಾರೆ. ಭಜರಂಗ ದಳ ಮತ್ತು ವಿಶ್ವ ಹಿಂದೂ ಪರಿಷ▯▯ವತಿಯಿಂದ ನಡೆಯುತ್ತಿರುವ ಹಿಂದೂ ಮಹಾ ಗಣಪತಿಯ ಶೋಭಾಯಾತ್ರೆಯ ಅಂಗವಾಗಿ ಗಣಪತಿಗೆ ಪೂಜೆಯನ್ನು ಸಲ್ಲಿಸಿ ಮಾತನಾಡಿದ ಅವರು, ಇತ್ತೀಚಿನ ದಿನಮಾನದಲ್ಲಿ ಹಿಂದೂ ಸಮಾಜವನ್ನು ಪಡೆಯುವ ಘಟನೆಗಳು ನಡೆಯುತ್ತಿವೆ. ಇದಕ್ಕೆ ತಕ್ಕ ಉತ್ತರವನ್ನು ನಾವುಗಳು ನೀಡಬೇಕಿದೆ. ಹಿಂದೂ ಸಾಮ್ರಾಜ್ಯ ಪುರಾತನವಾದ ಸಾಮ್ರಾಜ್ಯವಾಗಿದೆ, ಇದಕ್ಕೆ ತನ್ನದೆ ಆದ ಇತಿಹಾಸ ಇದೆ ಇದನ್ನು ನಾವುಗಳು ಮರೆಯಬಾರದು, ಭಾರತದಲ್ಲಿ ಹಿಂದುಗಳಿಗೆ ಮಾನ್ಯತೆ ದೂರೆಯಬೇಕಿದೆ, ನಮ್ಮನ್ನಾಳಿದ ಶ್ರೀರಾಮನ ದೇವಾಲಯವನ್ನು ಆಯೋದ್ಯೆಯಲ್ಲಿ ನಿರ್ಮಾಣ ಮಾಡಲಾಗಿದೆ. ಇದು ನಮ್ಮ ಹೆಮ್ಮೆಯ ಸಂಕೇತವಾಗಿದೆ ಎಂದರು. ಚಿತ್ರದುರ್ಗದಲ್ಲಿ ನಡೆಯುತ್ತಿರುವ ಹಿಂದೂ ಮಹಾ ಗಣಪತಿಯ ಈ ಶೋಭಾಯಾತ್ರೆ ಅತಿ ದೊಡ್ಡದಾದ ಶೋಭಾಯಾತ್ರೆಯಾಗಿದೆ ಇದು ದೇಶದಲ್ಲಿಯೇ ಹೆಸರುವಾಸಿಯಾಗಿದೆ. ಇಲ್ಲಿನ ವಿಶ್ವ ಹಿಂದು ಪರಿಷತ್ ಮತ್ತು ಭಜರಂಗ ದಳ ಉತ್ತಮವಾದ ಕಾರ್ಯವನ್ನು ಮಾಡಿದೆ. ಇಷ್ಟೊಂದು ಜನತೆಯನ್ನು ಸೇರಿಸುವುದರ ಮೂಲಕ ಅತಿ ದೊಡ್ಡದಾದ ಕಾರ್ಯವನ್ನು ಮಾಡಿದೆ. ಇಲ್ಲಿ ಮಠಗಳು ಸಂಖ್ಯೆ ಹೆಚ್ಚಾಗಿದ್ದು ಇದರಿಂದ ಎಲ್ಲಾ ಮಠಾಧೀಶರ ಆಶೀರ್ವಾದ ನಮ್ಮೆಲ್ಲರ ಮೇಲಿದೆ, ಇದರಿಂದ ನಮ್ಮ ಸನಾತನ ಧರ್ಮ ಗಟ್ಟಿಯಾಗಿ ನಿಂತಿದೆ ಎಂದರು. ಈ ಸಂದರ್ಭದಲ್ಲಿ ಶಾಂತವೀರ ಶ್ರೀಗಳು, ಶಿವಲಿಂಗಾನಂದ ಶ್ರೀಗಳು, ಪುರುಷೋತ್ತಮಾನಂದ ಶ್ರೀಗಳು, ಸರ್ದಾರ್ ಸೇವಾಲಾಲ್ ಶ್ರೀಗಳು, ಮಾದಾರ ಚನ್ನಯ್ಯಶ್ರೀಗಳು, ಮಡಿವಾಳ ಶ್ರೀಗಳು, ಸಂಸದರಾದ ಗೋವಿಂದ ಕಾರಜೋಳ, ಶಾಸಕರಾದ ಕೆ.ಸಿ.ವಿರೇಂದ್ರ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ನಗರಸಭಾ ಅಧ್ಯಕ್ಷರಾದ ಶ್ರೀಮತಿ ಸವಿತಾ ರಾಘವೇಂದ್ರ ಭಾಗವಹಿಸಿದ್ದರು.

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಫಾಸ್ಟ್ ನ್ಯೂಸ್

ನಿಧನವಾರ್ತೆ

ನಗರದ ತುರುವನೂರು ರಸ್ತೆ ನಿವಾಸಿ, ಶಿಕ್ಷಣ ಇಲಾಖೆ ನಿವೃತ್ತ ನೌಕರ ಚಲಪತಿ (66) ಅನಾರೋಗ್ಯದಿಂದ ಶನಿವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ವಿಜಯಕರ್ನಾಟಕ ಚಿತ್ರದುರ್ಗ ಜಿಲ್ಲಾ ಪ್ರಸರಾಂಗ ವಿಭಾಗದ ಪ್ರದೀಪ್ ಸೇರಿ ಮೂವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗ ಅಗಲಿದ್ದಾರೆ. ನಗರದ ಸರಕಾರಿ ಕಲಾ ಕಾಲೇಜು ಹಿಂಭಾಗದ ಯಂಗಮ್ಮನಕಟ್ಟೆ ರುದ್ರಭೂಮಿಯಲ್ಲಿ ಸೆ.29ರ ಮಧ್ಯಾಹ್ನ 3ರ ಸುಮಾರಿಗೆ ಅಂತ್ಯಕ್ರಿಯೆ ನೆರವೇರಿಸಲಾಗುತ್ತದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ಮುಡಾ ಹಗರಣ; ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆಗೆ 4 ತಂಡ ರಚನೆ

» ಮೈಸೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಡೆದಿದೆ ಎನ್ನಲಾದ ಅಕ್ರಮಕ್ಕೆ ಸಂಬಂಧಿಸಿ ನ್ಯಾಯಾಲಯದ ಆದೇಶದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಲೋಕಾಯುಕ್ತ, ಇದೀಗ ತನಿಖೆಗೆ ನಾಲ್ಕು ತಂಡಗಳನ್ನು ರಚಿಸಿದೆ.ಲೋಕಾಯುಕ್ತ ಎಸ್‌ಪಿ ಉದೇಶ್, ಡಿವೈಎಸ್‌ಪಿ ಎಸ್ ಮಾಲತೀಶ್, ಚಾಮರಾಜನಗರ ಡಿವೈಎಸ್‌ಪಿ ಮ್ಯಾಥ್ಯೂ ಥಾಮಸ್ ಹಾಗೂ ಇನ್‌ಸ್ಪೆಕ್ಟರ್ ಅವರನ್ನು ಒಳಗೊಂಡ ತನಿಖಾ ತಂಡ ರಚನೆ ಮಾಡಲಾಗಿದೆ. ಎಲ್ಲಾ ಅಧಿಕಾರಿಗಳ ಜೊತೆ ಎಸ್‌ಪಿ ಸಭೆ ನಡೆಸಿದ್ದಾರೆ. ಅಲ್ಲದೆ, ಈ ಅಧಿಕಾರಿಗಳ ತಂಡಗಳು ದಾಖಲೆಗಳ ಪರಿಶೀಲನೆ ನಡೆಸಿವೆ. ಇಂದು ಬೆಳಿಗ್ಗೆಯಿಂದ ದೂರಿನಲ್ಲಿ ಅಡಕವಾದ ದಾಖಲೆಗಳನ್ನು ಪರಿಶೀಲಿಸಿದ ಅಧಿಕಾರಿಗಳು, ಇನ್ನೂ ಒಂದೆರಡು ದಿನಗಳ ಕಾಲ ಸಂಪೂರ್ಣ ದಾಖಲೆಗಳ ಪರಿಶೀಲನೆ ನಡೆಸಿ ಅಧ್ಯಯನ ನಡೆಸಲಿದ್ದಾರೆ. ಬಳಿಕ ಪ್ರತಿಯೊಬ್ಬ ಅಧಿಕಾರಿಗಳ ಕೆಲಸವನ್ನು ವಿಂಗಡಣೆ ಮಾಡಿಕೊಳ್ಳಲಿದ್ದಾರೆ.

ಹಿಂದೂ ಮಹಾಗಣಪತಿ ಮೆರವಣಿಗೆಯಲ್ಲಿ ನಟ ದರ್ಶನ್ ಭಾವ ಚಿತ್ರದ ಪ್ರದರ್ಶನ

» ಚಿತ್ರದುರ್ಗ

ಈಗಾಗಾಗಲೇ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಜೈಲಿನಲ್ಲಿ ಬಂಧಿಯಾಗಿದ್ದಾರೆ. ಆದರೂ ಶನಿವಾರ (ಸೆಪ್ಟೆಂಬರ್ 28) ಹಿಂದೂ ಮಹಾಗಣಪತಿ ಬೃಹತ್ ಶೋಭಾಯಾತ್ರೆಯಲ್ಲಿ ಕೆಲ ಅಭಿಮಾನಿಗಳು ದರ್ಶನ್ ಭಾವಚಿತ್ರದ ಬಾವುಟ ಹಿಡಿದಿದ್ದು, ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಈ ವೇಳೆ ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು ಹಾಗೂ ದರ್ಶನ್ ಫ್ಯಾನ್ಸ್ ಮಧ್ಯೆ ವಾಗ್ವಾದ ನಡೆಯಿತು. ನಗರದ ಮದಕರಿ ಸರ್ಕಲ್‌ನಲ್ಲಿಈ ಘಟನೆ ನಡೆದಿದೆ. ಮದಕರಿ ವೃತ್ತದಲ್ಲಿ ಕೆಲವರು ಸುದೀಪ್ ಭಾವಚಿತ್ರದ ಫ್ಲಾಗ್ ಹಿಡಿದು ಡಾನ್ಸ್ ಮಾಡಿದ್ದು, ಮತ್ತೊಂದೆಡೆ ಇನ್ನೂ ಕೆಲವರು ದರ್ಶನ್ ಭಾವಚಿತ್ರದ ಫ್ಲಾಗ್ ಪ್ರದರ್ಶನ ಮಾಡಿದ್ದಾರೆ. ಈ ವೇಳೆ ದರ್ಶನ್ ಭಾವಚಿತ್ರದ ಫ್ಲಾಗ್ ಹಾರಿಸುವುದಕ್ಕೆ ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು ವಿರೋಧ ವ್ಯಕ್ತೊಡಿಸಿದ್ದಾರೆ. ಅಲ್ಲದೆ, ದರ್ಶನ್ ಅಭಿಮಾನಿಗಳಿಂದ ಫ್ಲಾಗ್ ಕಿತ್ತುಕೊಂಡು ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ದರ್ಶನ್ ಭಾವಚಿತ್ರದ ಫ್ಲಾಗ್ ಕಿತ್ತು ಪೊಲೀಸರಿಗೆ ನೀಡಿದರು. ಈ ಮೂಲಕ ದರ್ಶನ್ ಭಾವಚಿತ್ರವಿರುವ ಬಾವುಟವನ್ನು ಸೀಜ್ ಮಾಡಿದ್ದಾರೆ. ಇನ್ನೂ ಇತ್ತೀಚೆಗೆ ಫ್ಯಾನ್ ವಾರ್‌ಗಳು ಹೆಚ್ಚಾಗುತ್ತಿವೆ. ಅಂಧಾಭಿಮಾನಿಗಳಿಂದಲೇ ಇಂತಹ ಘಟನೆಗಳು ನಡೆಯಲು ಸಾಧ್ಯ. ಹಾಗೆಯೇ ಇಂದು ಚಿತ್ರದುರ್ಗದಲ್ಲಿ ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆ ವೇಳೆ ಕೆಲವು ಅಭಿಮಾನಿಗಳು ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ಬಾವುಟವನ್ನು ಹಾರಿಸಿದ್ದಾರೆ.

ರೈಲ್ವೆ ಉದ್ಯೋಗಾವಕಾಶ ಪಡೆಯಿರಿ: ಸೋಮಣ್ಣ

» ತುಮಕೂರು

ರೈಲ್ವೆ ಇಲಾಖೆಯಲ್ಲಿ 46 ಸಾವಿರ ಹುದ್ದೆಗಳಿಗೆ ಆಹ್ವಾನಿಸಲಾಗಿದೆ. ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶವಿರುವುದರಿಂದ ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ಈ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಉದ್ಯೋಗ ಪಡೆಯುವಂತೆ ಕೇಂದ್ರ ಜಲಶಕ್ತಿ ಹಾಗೂ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು. ನಗರದ ಹನುಮಂತಪುರದ ಕೊಲ್ಲಾಪುರದಮ್ಮ ಸಮುದಾಯ ಭವನದಲ್ಲಿ ತಿಗಳ ಸಮಾಜದವರು ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಗೌರವ ಸ್ವೀಕರಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಹೆಚ್ಚೆಚ್ಚು ಮಾತಾಡಬೇಕು: ಸಿದ್ದರಾಮಯ್ಯ

ಹೊಟ್ಟೆ ತುಂಬ ಹಿಟ್ಟು–ಬಾಯಿ ತುಂಬ ಅನ್ನ: ಅಮ್ಮನ ಮಾತನ್ನು ಸ್ಮರಿಸಿದ ಸಿ.ಎಂ.ಸಿದ್ದರಾಮಯ್ಯ

ನರೇಗಾ ಮತ್ತು ಅನ್ನಭಾಗ್ಯ ಕೊರೋನಾ ಸಂದರ್ಭದಲ್ಲಿ ಬಡವರನ್ನು ಬದುಕಿಸಿತು: ಸಿ.ಎಂ.ಸಿದ್ದರಾಮಯ್ಯ

» ಮೈಸೂರು

ಹೊಟ್ಟೆ ತುಂಬ ಹಿಟ್ಟು–ಬಾಯಿ ತುಂಬ ಅನ್ನ ಎಂದು ನನ್ನಮ್ಮ ಹೇಳುತ್ತಿದ್ದರು. ನಾನು ಅನ್ನ ಭಾಗ್ಯ ಜಾರಿಗೆ ತರಲು ಅನ್ನಕ್ಕಾಗಿ ಕಾದು ನಿಂತ ಪರಿಸ್ಥಿತಿಯೇ ಕಾರಣ ಎಂದು ಮುಖ್ಯಮಂತ್ರಿಗಳು ತಮ್ಮ ಬಾಲ್ಯದ ದಿನಗಳನ್ನು ಸ್ಮರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ "ಗ್ಯಾರಂಟಿ ಯೋಜನೆಗಳು: ಬಡವರ ಸುರಕ್ಷತೆ ಮತ್ತು ಕಲ್ಯಾಣ" ಕೃತಿ ಬಿಡುಗಡೆ ಮಾಡಿ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

1949 ನವೆಂಬರ್ 25 ರಂದು ಸಂವಿಧಾನ ಜಾರಿ ಸಭೆಯಲ್ಲಿ ಮಾಡಿದ ಭಾಷಣ ನನ್ನ ಗ್ಯಾರಂಟಿಗಳಿಗೆ ಸ್ಫೂರ್ತಿ. ಅವಕಾಶಗಳಿಂದ ವಂಚಿತರಾಗಿರುವವರಿಗೆ ಸಮಾನ ಅವಕಾಶಗಳು ಸಿಕ್ಕಾಗ ಸಮ ಸಮಾಜ ನಿರ್ಮಾಣ ಸಾಧ್ಯ. ಬಸವಾದಿ ಶರಣರು, ಬುದ್ಧ ಕೂಡ ಸಮ ಸಮಾಜದ ಬಗ್ಗೆ ಹೇಳಿದ್ದಾರೆ. ಕೇವಲ ಭಾಷಣಳಿಂದ ಸಮ ಸಮಾಜದ ಆಶಯ ಈಡೇರಲ್ಲ. ಈ ಕಾರಣಕ್ಕೇ ಮೊದಲ ಬಾರಿ ಮುಖ್ಯಮಂತ್ರಿ ಆದಾಗಲೂ ಹಲವು ಭಾಗ್ಯಗಳನ್ನು ಜಾರಿ ಮಾಡಿದೆ ಎನ್ನುತ್ತಾ ತಮ್ಮ ಬಾಲ್ಯದ ಬಡತನದ ದಿನಗಳನ್ನು ಸ್ಮರಿಸಿದರು.

ಹಬ್ಬ ಬಂದಾಗ ಮಾತ್ರ ನಮ್ಮ ಮನೆಯಲ್ಲಿ ಅನ್ನ ಮಾಡ್ತಿದ್ರು. ಅಕ್ಕ ಪಕ್ಕದವರ ಮನೆಯಲ್ಲಿ ಯಾರಿಗಾದ್ರೂ ಹುಷಾರು ತಪ್ಪಿದರೆ ಅವರಿಗೆ ಅನ್ನ ಮಾಡ್ತಿದ್ರು. ಅವರ ಮನೆ ಬಾಗಿಲಲ್ಲಿ ಒಂದು ತುತ್ತು ಅನ್ನಕ್ಕಾಗಿ ಕಾದು ನಿಂತಿದ್ದ ದಿನಗಳು ಇದ್ದವು. ಹೀಗೆ ಅನ್ನಕ್ಕೆ ಯಾರೂ ಕಾದು ನಿಲ್ಲಬಾರದು ಎನ್ನುವ ಕಾರಣಕ್ಕೆ ಅನ್ನಭಾಗ್ಯ ಜಾರಿಗೆ ತಂದದ್ದನ್ನು ವಿವರಿಸಿದರು.

ಜಾತಿ ಕಾರಣಕ್ಕಾಗಿ ಸಮಾಜದಲ್ಲಿ ಆರ್ಥಿಕ ಅಸಮಾನತೆ ಸೃಷ್ಟಿ ಆಯಿತು. ಆದ್ದರಿಂದ ಎಲ್ಲರಿಗೂ ಆರ್ಥಿಕ ಶಕ್ತಿ ಕೊಡುವ ಕಾರಣಕ್ಕೆ 2013–18 ರ ವರೆಗೆ ಹಲವು ಕಾರ್ಯಕ್ರಮಗಳನ್ನು ಜಾರಿ ಮಾಡಿದೆವು. ಹಾಗೆಯೇ ಎರಡನೇ ಬಾರಿ ಮುಖ್ಯಮಂತ್ರಿ ಆದಾಗಲೂ ಗ್ಯಾರಂಟಿಗಳ ಮೂಲಕ ಆರ್ಥಿಕ ಶಕ್ತಿ ನೀಡಿದೆವು ಎಂದರು. ನಮ್ಮ ಭಾಗ್ಯಗಳನ್ನು, ಗ್ಯಾರಂಟಿಗಳನ್ನು ವಿರೋಧಿಗಳು ಆಡಿಕೊಂಡರು. ಈಗಲೂ ಅಪ ಪ್ರಚಾರ ಮಾಡುತ್ತಿದ್ದಾರೆ. ಆದರೆ ನಾನು ಹೋದಲ್ಲಿ ಬಂದಲ್ಲಿ ಗ್ಯಾರಂಟಿಗಳ ಫಲಾನುಭವಿಗಳು ಕಾಂಗ್ರೆಸ್ ಸರ್ಕಾರಕ್ಕೆ ಧನ್ಯತೆ ಅರ್ಪಿಸುತ್ತಿದ್ದಾರೆ ಎನ್ನುತ್ತಾ ಉಚಿತ ಯೋಜನೆಗಳ ಫಲಾನುಭವಿಗಳು ಗೃಹಲಕ್ಷ್ಮಿ ಹಣದಲ್ಲಿ ಮಾಡಿದ ಸಾಧನೆಗಳನ್ನು ವಿವರಿಸಿದರು.

ನರೇಗಾ ಮತ್ತು ಅನ್ನಭಾಗ್ಯ ಯೋಜನೆಗಳು ಕೊರೋನಾ ಸಂದರ್ಭದಲ್ಲಿ ಬಡವರನ್ನು, ಕೆಳ ಮಧ್ಯಮ ವರ್ಗದವರನ್ನು ಬದುಕಿಸಿತು. ಹೀಗಾಗಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಹೆಚ್ಚೆಚ್ಚು ಮಾತಾಡಬೇಕು ಎಂದರು.

ಅನ್ನಭಾಗ್ಯದ ಮೇಲೆ "ಅನ್ನ" ಅಂತಲೇ ಸಿನಿಮಾ ಬಂದಿದೆ. ನಾನೂ ಸಿನಿಮಾ ನೋಡಿದೆ ಎಂದರು.

ಡಾ.ಡಿ.ಶ್ರೀನಿವಾಸ ಮಣಗಳ್ಳಿ ಅವರ ಸಂಪಾದನಾ ಕೃತಿ ಬಿಡುಗಡೆಯ ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಎಚ್.ಎಂ.ರೇವಣ್ಣ, ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪುರುಷೋತ್ತಮ ಬಿಳಿಮಲೆ, ವಿಧಾನ ಪರಿಷತ್ ಸದಸ್ಯರಾದ ಡಾ.ತಿಮ್ಮಯ್ಯ, ನಾಟಕಕಾರರಾದ ಕೆ.ವೈ.ನಾರಾಯಣಸ್ವಾಮಿ, ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ ನಿರ್ದೇಶಕರಾದ ಪ್ರೊ. ಎಂ.ಚಂದ್ರ ಪೂಜಾರಿ, ಕುಲಪತಿಗಳಾದ ಪ್ರೊ.ಎನ್.ಕೆ.ಲೋಕನಾಥ್, ಸಾಮಾಜಿಕ ಕಾರ್ಯಕರ್ತರಾದ ಅಹಿಂದ ಜವರಪ್ಪ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳು ಪ್ರಜಾತಂತ್ರವನ್ನು ಗಟ್ಟಿಗೊಳಿಸಿವೆ. ಡಾ.ಬಿ.ಆರ್. ಅಂಬೇಡ್ಕರ್ ಆಶಯವನ್ನು ಘೋಷಿಸದೇ ಈಡೇರಿಸಿವೆ. ಬಡವರಿಗೆ ಈ ಗ್ಯಾರಂಟಿಗಳು ಸಾಮಾಜಿಕವಾಗಿ ಚಾಲನಾ ಸಾಮರ್ಥ್ಯವನ್ನು ನೀಡಿವೆ. ಸಿದ್ದರಾಮಯ್ಯ ಅವರು ಸೂಕ್ಷ್ಮ ಮನಸ್ಸಿನ ನಾಯಕರು. ಇವರಿಂದ ಮಾತ್ರ ಸಮಾಜಕ್ಕೆ ಈ ಚಾಲನಾ ಸಾಮರ್ಥ್ಯ ನೀಡಲು ಸಾಧ್ಯ. ಹಸಿದವರ ಹೊಟ್ಟೆಗೆ ಅನ್ನ ಕೊಡುವುದೇ ದೇವರಿಗೆ ಕೊಡುವ ಕಾಣಿಕೆ. ಇದನ್ನು ನಾವು ಪ್ರಾಮಾಣಿಕವಾಗಿ ಒಪ್ಪಿ, ಸಾರ್ವಜನಿಕವಾಗಿ ಹೇಳಬೇಕಿದೆ.

» **ಕೆ.ವೈ.ನಾರಾಯಣಸ್ವಾಮಿ, ನಾಟಕಕಾರರು, ಪ್ರಾಧ್ಯಾಪಕರು.**

ಉಚಿತ ಯೋಜನೆಗಳನ್ನು ಜಾರಿ ತಂದ ಕರ್ನಾಟಕ, ತಮಿಳುನಾಡು, ಕೇರಳ ರಾಜ್ಯಗಳು ಮಾನವ ಅಭಿವೃದ್ಧಿ ಸೂಚ್ಯಂಕಗಳಲ್ಲಿ ಮೊದಲ ಸ್ಥಾನಗಳಲ್ಲಿ ಇದ್ದು ಜಿಡಿಪಿ ಬೆಳವಣಿಗೆ ಉತ್ತಮವಾಗಿವೆ. ಉಚಿತ ಯೋಜನೆಗಳನ್ನು ಜಾರಿ ಮಾಡದ ಉತ್ತರಪ್ರದೇಶ, ಬಿಹಾರ, ಮಧ್ಯಪ್ರದೇಶ ರಾಜ್ಯಗಳು ಮಾನವ ಅಭಿವೃದ್ಧಿ ಸೂಚ್ಯಂಕಗಳಲ್ಲಿ ಅತ್ಯಂತ ಕುಸಿದು, ಜಿಡಿಪಿ ಕೂಡ ಕುಸಿದಿದೆ.

» **ಪ್ರೊ.ಎಂ.ಚಂದ್ರ ಪೂಜಾರಿ, ನಿರ್ದೇಶಕರು, ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ.**

2017 ರಿಂದ ಭಾರತದ ಆರ್ಥಿಕ ಪರಿಸ್ಥಿತಿ ಕುಸಿಯುತ್ತಾ, ಕೊರೋನಾ ಕಾಲದಲ್ಲಿ ಇನ್ನಷ್ಟು ನೆಲಕಚ್ಚಿತು. ನಿರುದ್ಯೋಗ, ಬಡತನ ಇಮ್ಮಡಿಯಾಗಿ ಜಿಡಿಪಿ ಕುಸಿದಿತ್ತು. ಇಂಥಾ ಭಯಾನಕ ಆರ್ಥಿಕ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ಐದು ಗ್ಯಾರಂಟಿಗಳು ರಾಜ್ಯ ಸ್ಮಶಾನ ಆಗದಂತೆ ತಡೆದಿದೆ. ಕೊರೊನಾ ಕಾಲದ ಬಿಕ್ಕಟ್ಟುಗಳಿಗೆ ಗ್ಯಾರಂಟಿಗಳು ಪರಿಹಾರವಾಯಿತು. ಇದನ್ನು ನಾವೆಲ್ಲಾ ಧೈರ್ಯದಿಂದ ಹೇಳಬೇಕು. ದೇಶಕ್ಕೆ ಮಾದರಿಯಾದ ಈ ಯೋಜನೆಗಳು ಜನಕಲ್ಯಾಣಕ್ಕೆ ಹೇಗೆ ಸಹಕರಿಸಿತು ಎಂಬುದನ್ನು ಹೇಳಬೇಕು.

» **ಪುರುಷೋತ್ತಮ ಬಿಳಿಮಲೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು.**

ಬಿಜೆಪಿಯ ರಾಶಿ ರಾಶಿ ಭ್ರಷ್ಟರ ವಿರುದ್ಧ ಪ್ರಧಾನಿ ಮೋದಿ ಕ್ರಮ ಕೈಗೊಳ್ಳಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹ

» ಮೈಸೂರು

ಬಿಜೆಪಿ ಪಕ್ಷದಲ್ಲಿಯೇ ಬಹಳ ಭ್ರಷ್ಟಾಚಾರಿಗಳಿದ್ದು, ಪ್ರಧಾನಿ ಮೋದಿಯವರು ಅವರ ಮೇಲೆ ಮೊದಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಪ್ರದಾನಿ ಮೋದಿಯವರು ಹರಿಯಾಣದ ಪ್ರಚಾರ ಭಾಷಣದಲ್ಲಿ ರಾಜ್ಯದ ಮುಡಾ ವಿಚಾರವನ್ನು ಪ್ರಸ್ತಾಪಿಸುತ್ತಾರೆ ಎಂಬುದಕ್ಕೆ ಪ್ರತಿಕ್ರಯಿಸುತ್ತಾ, ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು ಮೋದಿಯವರು ಮಣಿಪುರದ ಹಿಂಸೆಯ ಬಗ್ಗೆ ಮಾತನಾಡುವುದೂ ಇಲ್ಲ , ಅಲ್ಲಿಗೆ ಭೇಟಿಯೂ ನೀಡಲಿಲ್ಲವೇಕೆ? ಎಂದು ಪ್ರಶ್ನಿಸಿದರು.

ಸುಳ್ಳು ಹೇಳಿಕೆಗಳಿಗೆ ಉತ್ತರ ನೀಡುವುದಿಲ್ಲ: ಕುಮಾರಸ್ವಾಮಿ ಪತ್ರಿಕಾ ಗೋಷ್ಠಿಯಲ್ಲಿ ನೀಡಿರುವ ಹೇಳಿಕೆ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ, ಕುಮಾರಸ್ವಾಮಿಯವರ ಎಲ್ಲ ಹೇಳಿಕೆಗಳು ಸುಳ್ಳಿನಿಂದ ಕೂಡಿದ್ದು, ಅವರ ಎಲ್ಲ ಮಾತಿಗೆ ಪ್ರತಿಕ್ರಿಯೆ ನೀಡುವುದು ಅವಶ್ಯಕತೆಯಿಲ್ಲ ಎಂದರು. ಪೊನ್ನಣ್ಣ ನವರು ನನ್ನ ಕಾನೂನು ಸಲಹೆಗಾರರಾಗಿರುವುದರಿಂದ , ಪ್ರತಿದಿನ ಅವರಿಂದ ಕಾನೂನಿನ ಚರ್ಚೆ ನಡೆಸುತ್ತೇನೆ ಎಂದರು.

ಮನು ಕುಲದ ಆಯಸ್ಸನ್ನು ಹೆಚ್ಚಿಸಿದ್ದು ವೈದ್ಯರು: ಸಿ.ಎಂ.ಸಿದ್ದರಾಮಯ್ಯ ಪ್ರಶಂಸೆ

9000 ವೈದ್ಯ ಸಂಪತ್ತನ್ನು ಸೃಷ್ಟಿಸಿದ ಶತಮಾನದ ಕಾಲೇಜು

» ಮೈಸೂರು

ವೈದ್ಯರು ಮತ್ತು ವೈದ್ಯಕೀಯ ಕ್ಷೇತ್ರ ಮನುಕುಲದ ಆಯಸ್ಸನ್ನು ಹೆಚ್ಚಿಸುವಲ್ಲಿ ಯಶಸ್ವಿಯಾಗಿದೆ ಎಂದು ಸಿ.ಎಂ.ಸಿದ್ದರಾಮಯ್ಯ ಪ್ರಶಂಸೆ ವ್ಯಕ್ತಪಡಿಸಿದರು.

ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶತಮಾನೋತ್ಸವದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ, ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಶತಮಾನ ಕಂಡ ಮೈಸೂರು ವೈದ್ಯಕೀಯ ಕಾಲೇಜು 9 ಸಾವಿರ ಮಂದಿ ವೈದ್ಯ ಸಂಪತ್ತನ್ನು ಸೃಷ್ಟಿಸಿದ ಹೆಗ್ಗಳಿಕೆ ಹೊಂದಿದೆ. ಪ್ರಪಂಚದಾದ್ಯಂತ ಈ ಕಾಲೇಜಿನಲ್ಲಿ ಕಲಿತ ವೈದ್ಯರು ವಿಸ್ತರಿಸಿಕೊಂಡಿದ್ದಾರೆ ಎಂದರು.

ಖಾಸಗಿ ಆಸ್ಪತ್ರೆಗಳಿಗಿಂತ ಸರ್ಕಾರಿ ಆಸ್ಪತ್ರೆಗಳ ವೈದ್ಯರಿಗೆ ಹೆಚ್ಚು ಪರಿಣಿತಿ ಮತ್ತು ಅನುಭವ ಇರುತ್ತದೆ ಎನ್ನುವುದು ನನ್ನ ಭಾವನೆ. ಸರ್ಕಾರಿ ಆಸ್ಪತ್ರೆಗೆ ಬರುವವರು ಹೆಚ್ಚಿನವರು ಬಡವರು. ಇವರು ವೈದ್ಯರನ್ನು ದೇವರಂತೆ ಕಾಣುತ್ತಾರೆ ಎಂದರು.

ವೈದ್ಯಕೀಯ ಕ್ಷೇತ್ರದ್ದು ಎರಡು ರೀತಿಯ ಜವಾಬ್ದಾರಿ ಇದೆ. ರೋಗ ಬಂದ ನಂತರ ಚಿಕಿತ್ಸೆ ಕೊಡುವುದು ಮತ್ತು ರೋಗ ಬರದಂತೆ ತಡೆಯುವುದೂ ಕೂಡ ವೈದ್ಯಕೀಯ ಕ್ಷೇತ್ರದ ಜವಾಬ್ದಾರಿ ಆಗಿದೆ ಎಂದರು.

ವೈದ್ಯರು ಸಮಾಜದ ಆಸ್ತಿ. ಇನ್ನೂ ಹೆಚ್ಚಿನ ವೈದ್ಯರು ಈ ಕಾಲೇಜಿನಿಂದ ಹೊರಗೆ ಬಂದು ಜನರ ಆಸ್ತಿ ಆಗಲಿ. ಸೇವೆ, ಶುಚಿತ್ವ ಮತ್ತು ಗುಣಮಟ್ಟದಲ್ಲಿ ಯಾವುದಕ್ಕೂ ಕಡಿಮೆ ಇಲ್ಲದಂತೆ ಮೈಸೂರು ವೈದ್ಯಕೀಯ ಕಾಲೇಜು ಪ್ರಗತಿ ಕಾಣಲಿ ಎಂದು ಹಾರೈಸಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ.ಮಹದೇವಪ್ಪ, ವೈದ್ಯಕೀಯ ಶಿಕ್ಷಣ ಸಚಿವರರಾದ ಶರಣ ಪ್ರಕಾಶ್ ಪಾಟೀಲ್, ಶಾಸಕರುಗಳಾದ ತನ್ವೀರ್ ಸೇಠ್, ಹರೀಶ್ ಗೌಡ, ಡಾ.ಶ್ರೀನಿವಾಸ್, ವಿಧಾನ ಪರಿಷತ್ ಸದಸ್ಯರಾದ ಡಾ.ತಿಮ್ಮಯ್ಯ, ಹಿರಿಯ ಐಪಿಎಸ್ ಅಧಿಕಾರಿ ಬೋರಲಿಂಗಯ್ಯ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

ದೇವರ ಕೋಣಗಳ ದಾಂಧಲೆಗೆ ನಲುಗಿದ ಹೊಸೂರು ಗ್ರಾಮಸ್ಥರು

» ಮೊಳಕಾಲ್ಮುರು

ಹಿಂಡು ಹಿಂಡಾಗಿ ಬಂದು ಜನರ ಮೇಲೆ ದಾಳಿ ನಡೆಸುವ ಕೋಣಗಳಿಂದ ಹೊಸೂರು ಗ್ರಾಮಸ್ಥರು ಭಯಭೀತರಾಗಿದ

ಭಾರತೀಯ ಮಾರುಕಟ್ಟೆಗೆ ಎಂಟ್ರಿ ಕೊಟ್ಟ ನಿಷೇಧಿತ ಚೀನಿ ಬೆಳ್ಳುಳ್ಳಿ: ತಿಂದ್ರೆ ಕ್ಯಾನ್ಸರ್, ಲಿವರ್ ಡಮಾರ್

» ನವದೆಹಲಿ

ಭಾರತೀಯ ಮಾರುಕಟ್ಟೆಗಳಲ್ಲಿ ನಿಷೇಧಿತ ಚೀನೀ ಬೆಳ್ಳುಳ್ಳಿ ಎಂಟ್ರಿಕೊಟ್ಟಿದೆ. ಒಂದು ವೇಳೆ ನೀವು ಈ ಬೆಳ್ಳುಳ್ಳಿ ತಿಂದ್ರೆ ಕ್ಯಾನ್ಸರ್, ಮೂತ್ರಪಿಂಡ ವೈಫಲ್ಯಕ್ಕೆ ಕಾರಣವಾಗಬಹುದು. ಹಾಗಾದ್ರೇ ಗುರುತಿಸೋದು ಹೇಗೆ ಎನ್ನುವ ಬಗ್ಗೆ ಮುಂದೆ ಓದಿ.

2014 ರಿಂದ ಚೀನೀ ಬೆಳ್ಳುಳ್ಳಿಯನ್ನು ನಿಷೇಧಿಸಿದ್ದರೂ, ಇದನ್ನು ಭಾರತೀಯ ಮಾರುಕಟ್ಟೆಗಳಲ್ಲಿ ಬಹಿರಂಗವಾಗಿ ಮಾರಾಟ ಮಾಡಲಾಗುತ್ತಿದೆ ಮತ್ತು ಹೆಚ್ಚಿನ ಬೇಡಿಕೆಯಿದೆ.

ಸ್ಥಳೀಯ ಅಡುಗೆಮನೆಗಳಲ್ಲಿ, ವಿಶೇಷವಾಗಿ ಉತ್ತರ ಭಾರತದಲ್ಲಿ, ಬೆಳ್ಳುಳ್ಳಿ ಸಾಮಾನ್ಯವಾಗಿ ಬಳಸುವ ರುಚಿ ಮತ್ತು ಪರಿಮಳವನ್ನು ಹೆಚ್ಚಿಸುತ್ತದೆ. ಇದನ್ನು ಹೆಚ್ಚಿನ ರೀತಿಯ ಪಾಕಪದ್ಧತಿಗಳಲ್ಲಿ ಬಳಸಲಾಗುತ್ತದೆ. ಇದು ವಿಶಿಷ್ಟ ಪರಿಮಳ ಮತ್ತುಶಕ್ತಿಯುತವಾಸನೆಯನ್ನುಹೊಂದಿದೆ. ಇದು ಜನಪ್ರಿಯ ಸೇರ್ಪಡೆಯಾಗಿದೆ.

ರುಚಿಯನ್ನು ಹೆಚ್ಚಿಸುವುದರ ಹೊರತಾಗಿ, ಬೆಳ್ಳುಳ್ಳಿ ವಿವಿಧ ಆರೋಗ್ಯ ಪ್ರಯೋಜನಗಳನ್ನು ಸಹ ಹೊಂದಿದೆ. ಇದರಲ್ಲಿ ಬ್ಯಾಕ್ಟೀರಿಯಾ, ಶಿಲೀಂಧ್ರ ಮತ್ತು ಪರಾವಲಂಬಿಗಳನ್ನು ಪ್ರತಿಬಂಧಿಸುವುದು ಮತ್ತು ನಾಶಪಡಿಸುವುದು, ರಕ್ತದೊತ್ತಡ, ಕೊಲೆಸ್ಟ್ರಾಲ್ ಮತ್ತು ಸಕ್ಕರೆ ಮಟ್ಟವನ್ನು ಕಡಿಮೆ ಮಾಡುವುದು ಮತ್ತು ರಕ್ತ ಹೆಪ್ಪುಗಟ್ಟುವುದನ್ನು ತಡೆಗಟ್ಟುವುದು ಮತ್ತು ಯಕೃತ್ತನ್ನು ರಕ್ಷಿಸುವುದು ಸೇರಿವೆ.

ತಜ್ಞರ ಪ್ರಕಾರ, ಬೆಳ್ಳುಳ್ಳಿ ಕ್ಯಾನ್ಸರ್ ವಿರೋಧಿ ಪರಿಣಾಮಗಳನ್ನು ಹೊಂದಿದೆ.

ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು, ಅನಾರೋಗ್ಯವನ್ನು ತಡೆಗಟ್ಟಲು ಮತ್ತು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಅದಕ್ಕಾಗಿಯೇ ನೀವು ಆರೋಗ್ಯಕರ ಬೆಳ್ಳುಳ್ಳಿಯನ್ನು ಸೇವಿಸುವುದು ಮುಖ್ಯ.

ಚೈನೀಸ್ ಬೆಳ್ಳುಳ್ಳಿ ಆರೋಗ್ಯಕ್ಕೆ ಏಕೆ ಕೆಟ್ಟದು?: ತಜ್ಞರ ಪ್ರಕಾರ, ಕೀಟನಾಶಕಗಳು ಮತ್ತು ರಾಸಾಯನಿಕಗಳ ಅತಿಯಾದ ಬಳಕೆಯಿಂದಾಗಿ, ಚೀನೀ ಬೆಳ್ಳುಳ್ಳಿ ನಿಮ್ಮ ಜೀವಕ್ಕೆ ಸಂಭಾವ್ಯ ಹಾನಿಯನ್ನುಂಟು ಮಾಡಲಿದೆ. ಇದು ಹುಣ್ಣುಗಳು, ಸೋಂಕು ಮತ್ತು ಗ್ಯಾಸ್ಟ್ರಿಕ್ ಸಮಸ್ಯೆಗಳಂತಹ ವಿವಿಧ ಜೀರ್ಣಕಾರಿ ಸಮಸ್ಯೆಗಳಿಗೆ ಕಾರಣವಾಗುತ್ತದೆ. ದೀರ್ಘಾವಧಿಯಲ್ಲಿ ನಿಮ್ಮ ಮೂತ್ರಪಿಂಡದ ಮೇಲೆ ಅತ್ಯಂತ ಹಾನಿಕಾರಕ ಪರಿಣಾಮಗಳಿಗೆ ಕಾರಣವಾಗಬಹುದು. ಇದು ಮಾರಣಾಂತಿಕವಾಗಿದೆ.

ಚೀನಾದ ಬೆಳ್ಳುಳ್ಳಿಯನ್ನು ಮಾರುಕಟ್ಟೆ ಕಪಾಟುಗಳಲ್ಲಿ ಇಟ್ಟಾಗ ಮೊಳಕೆಯೊಡೆಯದಂತೆ ತಡೆಯಲು ಹೆಚ್ಚಾಗಿ ರಾಸಾಯನಿಕಗಳೊಂದಿಗೆ ಸಿಂಪಡಿಸಲಾಗುತ್ತದೆ ಎಂದು ತಜ್ಞರು ಹೇಳುತ್ತಾರೆ.

ಬೆಳ್ಳುಳ್ಳಿ ನೈಸರ್ಗಿಕವಾಗಿ ಕಪ್ಪು ಕಲೆಗಳನ್ನು ಹೊಂದಿದೆ. ಇದರಿಂದಾಗಿ ಅನೇಕರು ಅದನ್ನು ಖರೀದಿಸುವುದಿಲ್ಲ. ಆದ್ದರಿಂದ, ಅದರ ನೋಟವನ್ನು ಸ್ವಚ್ಛಗೊಳಿಸಲು ಮತ್ತು ಹೆಚ್ಚು ಆಕರ್ಷಕವಾಗಿ ಕಾಣಲು, ಈ ಕಪ್ಪು ಕಲೆಗಳನ್ನು ಮರೆಮಾಡಲು ಚೀನೀ ಬೆಳ್ಳುಳ್ಳಿಯನ್ನು ಕ್ಲೋರಿನ್ ನಿಂದ ಬ್ಲೀಚ್ ಮಾಡಲಾಗುತ್ತದೆ.

ಕ್ಲೋರಿನ್ ಒಡ್ಡುವಿಕೆಯು ಉಸಿರಾಟದ ಸಮಸ್ಯೆಗಳಂತಹ ವಿವಿಧ ಅಪಾಯಕಾರಿ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದು. ಏಕೆಂದರೆ ಕ್ಲೋರಿನ್ ಅನ್ನು ಉಸಿರಾಡುವುದರಿಂದ ವಾಯುಮಾರ್ಗದ ಕಿರಿಕಿರಿ, ಉಬ್ಬಸ, ಉಸಿರಾಟದ ತೊಂದರೆ ಮತ್ತು ತೀವ್ರ ಕೆಮ್ಮು ಉಂಟಾಗುತ್ತದೆ. ಕ್ಲೋರಿನ್ ನ ಹೆಚ್ಚಿನ ಸಾಂದ್ರತೆಯು ಉಸಿರಾಟದ ತೊಂದರೆ, ಶ್ವಾಸಕೋಶದಲ್ಲಿ ದ್ರವ ಮತ್ತು ಶ್ವಾಸಕೋಶದ ಕುಸಿತಕ್ಕೆ ಕಾರಣವಾಗುತ್ತದೆ ಎಂದು ವೈದ್ಯರು ಹೇಳುತ್ತಾರೆ.

ಚೀನಾದ ಕಾನೂನುಗಳ ಪ್ರಕಾರ, ರೈತರು ಮೀಥೈಲ್ ಬ್ರೋಮೈಡ್ ಹೊಂದಿರುವ ಕೀಟನಾಶಕಗಳನ್ನು ಸಹ ಸಿಂಪಡಿಸುವುದು ಕಡ್ಡಾಯವಾಗಿದೆ. ಏಕೆಂದರೆ ಇದು ಕೀಟಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಆದಾಗ್ಯೂ, ದೀರ್ಘಾವಧಿಯಲ್ಲಿ, ಮೀಥೈಲ್ ಬ್ರೋಮೈಡ್ ನಿಮ್ಮ ಮೂತ್ರಪಿಂಡಗಳನ್ನು ಹಾನಿಗೊಳಿಸುತ್ತದೆ ಮತ್ತು ನಿಮ್ಮ ಯಕೃತ್ತಿನ ಮೇಲೆ ಪರಿಣಾಮ ಬೀರುತ್ತದೆ.

ಅಲ್ಲದೆ, ಪದೇ ಪದೇ ಒಡ್ಡಿಕೊಳ್ಳುವುದು ಕಳಪೆ ದೃಷ್ಟಿ, ಮಾನಸಿಕ ಗೊಂದಲ, ವ್ಯಕ್ತಿತ್ವದ ಬದಲಾವಣೆಗಳು, ಭ್ರಮೆ, ನಡುಕ, ತೋಳುಗಳು ಮತ್ತು ಕಾಲುಗಳ ನೋವು ಅಥವಾ ಮರಗಟ್ಟುವಿಕೆ, ಮಾತು ಮತ್ತು ಸಮನ್ವಯದಲ್ಲಿ ಸಮಸ್ಯೆಗಳು ಮತ್ತು ಸಮತೋಲನದ ನಷ್ಟ ಸೇರಿದಂತೆ ಮೆದುಳು ಮತ್ತು ನರಮಂಡಲಕ್ಕೆ ಹಾನಿಯನ್ನುಂಟು ಮಾಡುತ್ತದೆ.

ಚೀನೀ ಬೆಳ್ಳುಳ್ಳಿಯನ್ನು ಪತ್ತೆ ಹಚ್ಚುವುದು ಹೇಗೆ.?: ಹಾನಿಕಾರಕ ಚೀನೀ ಬೆಳ್ಳುಳ್ಳಿ ಮತ್ತು ಸ್ಥಳೀಯ ಬೆಳ್ಳುಳ್ಳಿಯ ನಡುವಿನ ವ್ಯತ್ಯಾಸವನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ. ಇದರಿಂದ ನೀವು ರಾಸಾಯನಿಕ ತುಂಬಿದ ಬೆಳ್ಳುಳ್ಳಿಗಳನ್ನು ಖರೀದಿಸದೆ ನಿಮ್ಮ ಕುಟುಂಬದ ಆರೋಗ್ಯವನ್ನು ರಕ್ಷಿಸುತ್ತೀರಿ. ಇವೆರಡರ ನಡುವಿನ ವ್ಯತ್ಯಾಸವನ್ನು ನೀವು ಗುರುತಿಸಬಹುದಾದ ಕೆಲವು ವಿಧಾನಗಳು:

ಗಾತ್ರದಲ್ಲಿ ಚಿಕ್ಕದು: ಚೈನೀಸ್ ಬೆಳ್ಳುಳ್ಳಿ ಯಾವಾಗಲೂ ಗಾತ್ರದಲ್ಲಿ ಚಿಕ್ಕದಾಗಿರುತ್ತದೆ. ಪ್ರಕಾಶಮಾನವಾದ ಬಿಳಿ ಅಥವಾ ಗುಲಾಬಿ ಬಣ್ಣದಲ್ಲಿರುತ್ತದೆ. ಮತ್ತೊಂದೆಡೆ, ಭಾರತೀಯ ಬೆಳ್ಳುಳ್ಳಿ ಗಾತ್ರದಲ್ಲಿ ದೊಡ್ಡದಾಗಿದೆ. ಬಿಳಿಯಿಂದ ಗುಲಾಬಿಯಿಂದ ತಿಳಿ ಕಂದು ಬಣ್ಣದವರೆಗೆ ಸಿಪ್ಪೆಗಳನ್ನು ಹೊಂದಿದೆ. ಗಾತ್ರ ಮತ್ತು ಬಣ್ಣದಲ್ಲಿನ ವ್ಯತ್ಯಾಸಗಳು ವಿವಿಧ ಬೆಳೆಯುತ್ತಿರುವ ಪರಿಸರಗಳು ಮತ್ತು ಕಾರ್ಯವಿಧಾನಗಳನ್ನು ಪ್ರತಿಬಿಂಬಿಸುತ್ತವೆ.

ರುಚಿ ಮತ್ತು ಸುವಾಸನೆ: ಭಾರತೀಯ ಬೆಳ್ಳುಳ್ಳಿಯು ಗಾಢವಾದ ವಾಸನೆ ಮತ್ತು ದೃಢವಾದ ಪರಿಮಳವನ್ನು ಹೊಂದಿದೆ. ಇದು ಹೆಚ್ಚಿನ ಭಕ್ಷ್ಯಗಳಲ್ಲಿ ಸೇರಿಸಲೇಬೇಕಾದ ಆಹಾರವಾಗಿದೆ. ಮತ್ತೊಂದೆಡೆ, ಚೀನೀ ಬೆಳ್ಳುಳ್ಳಿ ಮೃದುವಾದ ಸುವಾಸನೆ ಮತ್ತು ರುಚಿಯನ್ನು ಹೊಂದಿದೆ. ಇದು ಕೆಲವು ಪಾಕಶಾಲೆಯ ಅನ್ವಯಿಕೆಗಳಿಗೆ ಕಡಿಮೆ ಸೂಕ್ತವಾಗಿದೆ.

ಸಿಪ್ಪೆ ಸುಲಿಯಲು ಸುಲಭ: ಚೀನೀ ಬೆಳ್ಳುಳ್ಳಿ ಸಿಪ್ಪೆ ಸುಲಿಯಲು ಸುಲಭವಾಗಿರುವುದರಿಂದ, ಹೆಚ್ಚಿನ ಜನರು ಅದನ್ನು ಖರೀದಿಸಲು ಬಯಸುತ್ತಾರೆ. ಆದಾಗ್ಯೂ, ಸ್ಥಳೀಯ ಬೆಳ್ಳುಳ್ಳಿಯಲ್ಲಿ ಉತ್ತಮವಾದ, ಸಣ್ಣ ಲವಂಗಗಳಿವೆ, ಅದು ಹೊರಬರಲು ಸ್ವಲ್ಪ ಕಷ್ಟ.

ಫಾಸ್ಟ್ ನ್ಯೂಸ್

8000 ಕೋಟಿ ರೂ. ಅಕ್ರಮ: ನಿರ್ಮಲಾ ಸೀತಾರಾಮನ್ 5 ಮಂದಿ ವಿರುದ್ಧ ಎಫ್ ಐಆರ್ ದಾಖಲು

» ಬೆಂಗಳೂರು

8000 ಕೋಟಿ ರೂ. ಚುನಾವಣಾ ಬಾಂಡ್ ಅಕ್ರಮ ಪ್ರಕರಣದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಸೇರಿ ನಾಲ್ವರ ವಿರುದ್ಧ ಎಫ್ ಐಆರ್ ದಾಖಲಿಸಲಾಗಿದೆ. ಅಧಿಕಾರ ದುರುಪಯೋಗ ಪಡಿಸಿಕೊಂಡು ಚುನಾವಣಾ ಬಾಂಡ್ ಪಡೆದ ಆರೋಪದ ಮೇಲೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸೇರಿದಂತೆ ಹಲವರ ವಿರುದ್ಧ ಬೆಂಗಳೂರಿನ ತಿಲಕನಗರ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ. ಪ್ರಕರಣದಲ್ಲಿ ಕೇಂದ್ರ ಸಚಿವರು ಇರುವುದರಿಂದ ತನಿಖೆ ನಡೆಸುವುದು ಪೊಲೀಸ್ ಠಾಣೆ ವ್ಯಾಪ್ತಿಗೆ ಕಷ್ಟವಾಗುತ್ತದೆ ಎಂಬ ಕಾರಣಕ್ಕೆ ಎಸ್ ಐಟಿ ಪೊಲೀಸರಿಗೆ ಪ್ರಕರಣ ಹಸ್ತಾಂತರ ಮಾಡಲು ಪೊಲೀಸ್ ಇಲಾಖೆ ನಿರ್ಧರಿಸಿದೆ ಎಂದು ಹೇಳಲಾಗಿದೆ.

ಚುನಾವಣಾ ಬಾಂಡ್ ಅಕ್ರಮದಲ್ಲಿ 5 ಮಂದಿಯ ಹೆಸರನ್ನು ಉಲ್ಲೇಖಿಸಲಾಗಿದ್ದು, ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಎ1 ಆರೋಪಿಯಾಗಿದ್ದರೆ, ಇಡಿ ಅಧಿಕಾರಿಗಳು ಎ2, ಕೇಂದ್ರ ಸಚಿವ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಎ3, ನಳಿನ್ ಕುಮಾರ್ ಕಟೀಲ್ ಎ4, ಬಿ.ವೈ.ವಿಜಯೇಂದ್ರ ಎ5, ರಾಜ್ಯ ಬಿಜೆಪಿ ಪದಾಧಿಕಾರಿಗಳು ಎ6 ಆರೋಪಿಗಳಾಗಿದ್ದಾರೆ.

ಬಾಗಲಕೋಟೆ: ಪೊಲೀಸರ ಹೆಸರಿನಲ್ಲಿ ಸ್ವಾಮೀಜಿಗೆ ರೂ 1 ಕೋಟಿ ವಂಚನೆ

» ಬಾಗಲಕೋಟೆ

ತಾಲ್ಲೂಕಿನ ಗದ್ದನಕೇರಿ ಬಳಿ ಇರುವ ರಾಮಾರೂಢ ಮಠದ ಸ್ವಾಮೀಜಿಗೆ ಉನ್ನತ ಪೊಲೀಸ್ ಅಧಿಕಾರಿ ಎಂದು ಹೇಳಿಕೊಂಡು □1 ಕೋಟಿ ವಂಚನೆ ಮಾಡಲಾಗಿದೆ.

ಜೆಡಿಎಸ್ ಮುಖಂಡ ಪ್ರಕಾಶ ಮುಧೋಳ ಎನ್ನುವವರು ಡಿವೈಎಸ್‌ಪಿ ಹೆಸರಿನಲ್ಲಿ, ಇಬ್ಬೊಬ್ಬರು ಎಡಿಜಿಪಿ ಹೆಸರಿನಲ್ಲಿ ರಾಮಾರೂಢ ಮಠದ ಪರಮಹಂಸ ಪರಮರಾಮರೂಢ ಸ್ವಾಮೀಜಿಗೆ ಕರೆ ಮಾಡಿ, ಗೃಹ ಸಚಿವರ ಕಚೇರಿಯಿಂದ ನಮ್ಮ ಕಚೇರಿಗೆ ಸಾಕಷ್ಟು ದೂರುಗಳು ಬಂದಿವೆ. ಅವುಗಳನ್ನು ವಿಚಾರಣೆ ಮಾಡಬೇಕು ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ. ಜೈಲಿಗೆ ಕಳುಹಿಸುತ್ತೇವೆ ಎಂದು ಹೆದರಿಸಿದ್ದಾರೆ. ಎಲ್ಲ ಪ್ರಕರಣಗಳನ್ನು ಮುಚ್ಚಿ ಹಾಕಲು ಸಾಹೇಬರಿಗೆ ಹಣ ಕೊಡದಿದ್ದರೆ, ಕೊಲೆ ಮಾಡುವುದಾಗಿ ಬೆದರಿಸಿ □1 ಕೋಟಿ ನೀಡುವಂತೆ ಬೇಡಿಕೆ ಇಟ್ಟಿದ್ದಾರೆ. ಇದರಿಂದ ಬೆದರಿದ ಸ್ವಾಮೀಜಿ ಬೆಂಗಳೂರಿನ ವಿಧಾನಸೌಧದ ಬಳಿ □61 ಲಕ್ಷ ಹಾಗೂ ಎರಡು ಖಾಲಿ ಚೆಕ್, ಹುಬ್ಬಳ್ಳಿಯ ಈದ್ಗಾ ಮೈದಾನದ ಹತ್ತಿರ □31 ಲಕ್ಷ ಹಣವನ್ನು ಶಿವಕುಮಾರ ಮಡ್ಡಿ ಮೂಲಕ ಕೊಡಲಾಗಿದೆ. □1 ಕೋಟಿ ಪಡೆದ ನಂತರ ಆರೋಪಿಗಳು ಸ್ವಾಮೀಜಿ ಬಳಿ ಮತ್ತೆ ಹಣಕ್ಕೆ ಬೇಡಿಕೆ ಇಟ್ಟಾಗ ಅನುಮಾನಗೊಂಡ ಸ್ವಾಮೀಜಿಗೆ ಮೋಸ ಹೋಗಿದ್ದೇನೆ ಎಂದು ಗೊತ್ತಾಗಿ ಬಾಗಲಕೋಟೆಯ ಸಿಇಎನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

4 ತಿಂಗಳ ಮಗು ನೋಬಲ್ ಪುಸ್ತಕದಲ್ಲಿ ಸ್ಥಾನ

» ಪರಶುರಾಂಪುರ

ಇಲ್ಲೊಂದು ಮಗು ಕೇವಲ 4 ತಿಂಗಳಲ್ಲೇ ಅಚ್ಚರಿ ಹುಟ್ಟಿಸುವ ಜ್ಞಾಪಕ ಶಕ್ತಿ ಹೊಂದಿದ್ದು, ಈಗ ನೋಬಲ್ ಬುಕ್ ಆಫ್ ರೆಕಾರ್ಡ್‌ನಲ್ಲಿ ಹೆಸರು ದಾಖಲಿಸಿದೆ.ಹೌದು ಹೋಬಳಿಯ ಕಾಮಸಮುದ್ರ ಗ್ರಾಮದ ನಿವಾಸಿಗಳಾದ ದಾನೇಶ್ವರಿ ಮತ್ತು ರಾಮಾಂಜನೇಯ ದಂಪತಿಯ ಮಗು ಯಶ್ವಿಕ್ ಅರ್ಜುನ್ ಆರ್. ಈ ರೀತಿಯ ದಾಖಲೆ ಬರೆದು ಎಲ್ಲರಲ್ಲೂ ಅಚ್ಚರಿ ಮೂಡಿಸಿದೆ.ಪಕ್ಷಿಗಳು,ಕಲರ್ , ಅಕ್ಷರ ,ಹಣ್ಣುಗಳು, ತರಕಾರಿಗಳು, ಬಣ್ಣಗಳು, ವರ್ಣಮಾಲೆಗಳು ಮತ್ತು ಆಕಾರಗಳು, ಸಂಖ್ಯೆಗಳು ಸೇರಿದಂತೆ ಇನ್ನಿತರೆ 216 ಫ್ಲ್ಯಾಷ್ ಕಾರ್ಡ್‌ಗಳನ್ನು ಗುರುತಿಸುವ ಸಾಮರ್ಥ್ಯದಿಂದಾಗಿ ಮಗು ಅಂತಹ ಚಿಕ್ಕ ವಯಸ್ಸಿನಲ್ಲಿ ಫ್ಲ್ಯಾಷ್ ಕಾರ್ಡ್‌ಗಳನ್ನು ಗುರುತಿಸುವ ಅಸಾಮಾನ್ಯ ಸಾಮರ್ಥ್ಯಕ್ಕಾಗಿ ನೋಬಲ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ತನ್ನ ಹೆಸರನ್ನು ಬರೆದಿದೆ.

ಮಗುವಿನ ಕುಟುಂಬವು ಮಗುವಿನ ಸಾಮರ್ಥ್ಯಗಳನ್ನು ಪ್ರದರ್ಶಿಸುವ ವಿಡಿಯೋವನ್ನು ರೆಕಾರ್ಡ್ ಮಾಡಿ ನೋಬಲ್ ವರ್ಲ್ಡ್ ರೆಕಾರ್ಡ್‌ಗೆ ಕಳುಹಿಸಿದರು. ನೋಬಲ್ ವರ್ಲ್ಡ್ ರೆಕಾರ್ಡ್ಸ್ ತಂಡವು ಪರಿಶೀಲಿಸಿತು ಮತ್ತು ಮಗುವಿನ ವಿಶೇಷ ಪ್ರತಿಭೆಯನ್ನು ಪರೀಕ್ಷಿಸಿತು. ಬಳಿಕ ವಿಶೇಷ ಪ್ರಮಾಣಪತ್ರವನ್ನು ನೀಡಿದ್ದಾರೆ, ಕೇವಲ ನಾಲ್ಕು ತಿಂಗಳ ಎಳೆಯ ವಯಸ್ಸಿನಲ್ಲೇ ವಿಶ್ವದಾಖಲೆಯನ್ನು ಈ ಮಗು ಬರೆದಿರುವುದು ಪೋಷಕರಿಗೆ ಇನ್ನಿಲ್ಲದ ಸಂತಸ ತಂದಿದೆ.

ಮಗುವಿನ ಸಾಧನೆಗೆ ಚಳ್ಳಕೆರೆ ತಾಲ್ಲೂಕಿನ ಶಾಸಕ ಟಿ.ರಘುಮೂರ್ತಿ ಹಾಗೂ ಜಿಲ್ಲಾಧಿಕಾರಿ ವೆಂಕಟೇಶ್ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿ, ನೋಬಲ್ ಬುಕ್ ಆಫ್ ರೆಕಾರ್ಡ್ಸ್ ಸರ್ಟಿಫಿಕೇಟ್ ನೀಡಿ ಸನ್ಮಾನಿಸಿದರು. ಸಾಧನೆಗೆ ಜನರು ಮೆಚ್ಚುಗೆ ವ್ಯಕ್ತಪಡಿಸಿದರು.

ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರೀಕರ ಆದ್ಯ ಕರ್ತವ್ಯ: ನ್ಯಾಯಾಧೀಶ ಶಮೀರ್ ಪಿ.ನಂದ್ಯಾಲ್.

» ಚಳ್ಳಕೆರೆ

ನಮ್ಮಮುತ್ತಲ ಗಿಡ ನೆಡುವ ಮೂಲಕ ಪರಿಸರ ಬೆಳವಣಿಗೆಗೆ ಸಹಕಾರ ನೀಡಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶ ಶಮೀರ್ ಪಿ.ನಂದ್ಯಾಲ್ ತಿಳಿಸಿದರು.

ಅವರು, ಶನಿವಾರ ನ್ಯಾಯಾಲಯದ ಆವರಣದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ನಗರಸಭೆ ಮತ್ತು ಅರಣ್ಯ ಇಲಾಖೆ ಸಹಯೋಗದಲ್ಲಿ ನಡೆದ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡಿ(ಏಕ್ ಪೇಡ್ ಮಾ ಕೆ ನಾಮ್) ಸ್ವಚ್ಚತಾ ಹೀ ಸೇವಾ ಅಭಿಯಾನ ಕಾರ್ಯವನ್ನು ಗಿಡನೆಟ್ಟು, ಆವರಣ ಸ್ವಚ್ಚಗೊಳಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅಪರ ಸಿವಿಲ್ ನ್ಯಾಯಾಧೀಶೆ ಎಚ್.ಆರ್.ಹೇಮಾ, ನಾವೆಲ್ಲರೂ ಪರಿಸರ ಸಂರಕ್ಷಕರಾದಾಗ ಮಾತ್ರ ನಮ್ಮ ಬದುಕು ಸಾರ್ಥಕವಾಗುತ್ತದೆ. ಕೇವಲ ಗಿಡವನ್ನು ನೆಡುವುದು ಮಾತ್ರವಲ್ಲ ಅವುಗಳ ಪೋಷಣೆಯನ್ನು ಮಾಡಬೇಕು. ನಮ್ಮ ಸುತ್ತಮುತ್ತಲ ಸ್ವಚ್ಚತೆಯ ಬಗ್ಗೆ ಹೆಚ್ಚು ಗಮನ ನೀಡಬೇಕೆಂದರು.

ಪ್ರಮುಖ ಸುದ್ದಿ

ಮಹಾಲಯ ಅಮಾವಾಸ್ಯೆ, ಸೂರ್ಯಗ್ರಹಣ, ನಿಮಗೆ ಗೊತ್ತಿರಲೇಬೇಕಾದ ಅಂಶಗಳಿವು

ಈ ಬಾರಿ ಅಕ್ಟೋಬರ್ 2ನೇ ತಾರೀಕು ಮಹಾಲಯ ಅಮಾವಾಸ್ಯೆ ಇದೆ. ಅದೇ ದಿನ ಕೇತುಗ್ರಸ್ತ ಸೂರ್ಯ ಗ್ರಹಣವೂ ಇದೆ. ಆದರೆ ಅದು ಭಾರತದಲ್ಲಿ ಗೋಚರವಾಗುತ್ತಿಲ್ಲ. ಆ ಕಾರಣಕ್ಕೆ ಯಾವುದೇ ಗ್ರಹಣಾಚರಣೆಗಳೂ ಇಲ್ಲ. ಆದರೆ ಮಹಾಲಯ ಅಮಾವಾಸ್ಯೆ ಅಂದಾಕ್ಷಣ ಕರಾಳ, ಭಯಾನಕ ಇಂಥ ಪದಗಳನ್ನು ಯಥೇಚ್ಛವಾಗಿ ಬಳಸುತ್ತಾ ಬರಲಾಗುತ್ತಿದೆ.

ಪ್ರಧಾನ ಗುರುಗಳು ಹಾಗೂ ದೈವಿಕ ಅರ್ಚಕ ಮನೆತನದವರು ವಿದ್ವಾನ್ ವಿದ್ಯಾಧರ್ ತಂತ್ರಿ ಜ್ಯೋತಿಷ್ಯರು ಮೊಬೈಲ್ ಸಂಖ್ಯೆ 9686268564 ಇವರು ಚೌಡಿ ಉಪಾಸನಾ ಮತ್ತು ಕೇರಳದ ವಿಶಿಷ್ಟ ಅನುಷ್ಠಾನ ಪೂಜೆಗಳಿಂದ ತಮ್ಮಲ್ಲಿ ಉಲ್ಬಣಿಸುವ ಸಕಲ ಸಮಸ್ಯೆಗಳಿಗೆ ಪರಿಹಾರ ಮತ್ತು ಮಾರ್ಗದರ್ಶನ ತಿಳಿಸಿಕೊಡುತ್ತಾರೆ ನಿಮ್ಮ ಧ್ವನಿಯ ಮೂಲಕ ನಿಮ್ಮ ಸಮಸ್ಯೆಗಳನ್ನು ಅರಿತು ಅಥವಾ ಜನ್ಮಜಾತಕ ಫೋಟೋ ಹಸ್ತಸಾಮುದ್ರಿಕ ನೋಡಿ ಭವಿಷ್ಯ ಜಾತಕ ನಿರೂಪಣೆ ಮಾಡುತ್ತಾರೆ 9686268564 ನಿಮ್ಮ ಸಮಸ್ಯೆಗಳಾದ ಆರೋಗ್ಯ ಸಂತಾನ ಸಾಲದ ಬಾಧೆ ಪ್ರೀತಿಯಲ್ಲಿ ನಂಬಿ ಮೋಸ ವಿವಾಹ ಉದ್ಯೋಗದಲ್ಲಿ ತೊಂದರೆ ಸತಿ ಪತಿ ಕಲಹ ಪ್ರೇಮ ವಿಚಾರ ಅತ್ತೆ–ಸೊಸೆ ಕಲಹ ದೃಷ್ಟಿ ದೋಷ ಮನೆಯಲ್ಲಿ ದಟ್ಟದರಿದ್ರ ಗಂಡನ ಪರ ಸ್ತ್ರೀ ಸಹವಾಸ ಬಿಡಿಸಲು ವ್ಯಾಪಾರದಲ್ಲಿ ತೊಂದರೆ ಕುಟುಂಬ ಕಷ್ಟ ಹಣಕಾಸಿನ ಅಡಚಣೆ ಪ್ರೇಮ ವೈಫಲ್ಯ ಹಾಗೂ ಸ್ತ್ರೀ ಪುರುಷ ವಶೀಕರಣ ದಂತಹ ಸಮಸ್ಯೆಗಳಿಗೆ ಇನ್ನೂ ಅನೇಕ ಗುಪ್ತ ಸಮಸ್ಯೆಗಳಿಗೆ ತಾಂಬೂಲ ಪ್ರಶ್ನೆ ಅಷ್ಟಮಂಡಲ ಪ್ರಶ್ನೆ ಕವಡೆ ಪ್ರಶ್ನೆ ಹಾಕಿ ನಿಮ್ಮ ಕಷ್ಟಕಾರ್ಪಣ್ಯಗಳಿಗೆ ಶಾಶ್ವತ ಪರಿಹಾರ ಮತ್ತು ಉತ್ತಮ ಸಲಹೆ ಪಡೆದುಕೊಳ್ಳಿ ಕರೆ

ಫಾಸ್ಟ್ ನ್ಯೂಸ್

ಗೃಹಲಕ್ಷ್ಮಿ ಹಣದ ನಿರೀಕ್ಷೆಯಲ್ಲಿರುವವರಿಗೆ ಸಿಹಿಸುದ್ದಿ

» ಬೆಂಗಳೂರು

ಗೃಹಲಕ್ಷ್ಮಿ ಹಣವನ್ನು ಕಾಯುತ್ತಿರುವ ಲಕ್ಷಾಂತರ ಮಹಿಳೆಯರಿಗೆ ಈ ತಿಂಗಳು ಮುಗಿಯುವ ಮುನ್ನ ಸಿಹಿಸುದ್ದಿ ಇದೆ. ಮಹಿಳೆಯರ ಖಾತೆಗೆ ಕಳೆದೆರಡು ತಿಂಗಳ ಹಣ ಬರಬೇಕಿದ್ದು, ಇದರಲ್ಲಿ ಒಂದು ತಿಂಗಳ ಹಣ ಜಮಾವಣೆ ಮಾಡಲು ಇಲಾಖೆ ಮುಂದಾಗಿದೆ ಎಂದು ತಿಳಿದುಬಂದಿದೆ. ಇತ್ತೀಚೆಗಷ್ಟೇ ಜೂನ್ ತಿಂಗಳ ಹಣ ಬಂದಿತ್ತು. ಆದರೆ ಸೆಪ್ಟೆಂಬರ್ ಮುಗಿಯುತ್ತಾ ಬಂದರೂ ಜುಲೈ ಹಾಗೂ ಆಗಸ್ಟ್ ತಿಂಗಳ ಹಣ ಬಂದಿಲ್ಲ. ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯನ್ನು ಜಾರಿ ಮಾಡಿದಾಗಿನಿಂದಲೂ ಒಂದಿಲ್ಲೊಂದು ಅಡೆತಡೆಗಳು ಉಂಟಾಗುತ್ತಿವೆ. ಸೆಪ್ಟೆಂಬರ್ ತಿಂಗಳು ಕೊನೆಗೆ ಬಂದರೂ ಜುಲೈ, ಆಗಸ್ಟ್ ತಿಂಗಳುಗಳ ಗೃಹಲಕ್ಷ್ಮಿ ಹಣ ಮಾತ್ರ ಮಹಿಳೆಯರ ಖಾತೆಯನ್ನು ಸೇರಿಲ್ಲ. ಇದೀಗ ಜುಲೈ ತಿಂಗಳ ಹಣ ಒದಗಿಸಲು ಸಚಿವರು ಹಣಕಾಸು ಇಲಾಖೆಗೆ ತಾಕೀತು ಮಾಡಿದ್ದಾರೆ. ಹಣ ಜಮೆ ಆಗದಿರುವುದಕ್ಕೆ ಕಾರಣ ಹಣಕಾಸು ಇಲಾಖೆಯಿಂದ ಅನುದಾನ ಬಿಡುಗಡೆ ಆಗದಿರುವುದು. ಸದ್ಯ ಇಲಾಖೆಯಿಂದ ಮೂರು ತಿಂಗಳ ಕಂತಿನ ಹಣ ಕೇಳಲಾಗಿದೆ. ಒಂದೊಂದೇ ತಿಂಗಳ ಹಣವನ್ನು ಹಣಕಾಸು ಇಲಾಖೆ ಬಿಡುಗಡೆ ಮಾಡುತ್ತಿದೆ. ಇತ್ತೀಚೆಗೆ ಜೂನ್ ತಿಂಗಳ ಹಣ ಬಿಡುಗಡೆ ಮಾಡಿತ್ತು. ಪ್ರತಿ ತಿಂಗಳು 1.21 ಕೋಟಿ ಮಹಿಳೆಯರ ಖಾತೆಗೆ ಗೃಹಲಕ್ಷ್ಮಿ ಹಣ ಬರಬೇಕು. ಪ್ರತಿ ತಿಂಗಳೂ ಗೃಹಲಕ್ಷ್ಮಿ ಗೃಹಲಕ್ಷ್ಮಿ ಹಣ ಬರಬೇಕು. ಪ್ರತಿ ತಿಂಗಳೂ ಗೃಹಲಕ್ಷ್ಮಿ ಯೋಜನೆಗೆ 2500 ಕೋಟಿ ಹಣ ಬೇಕಾಗುತ್ತದೆ. ಮಹಿಳಾ ಮತ್ತು ಮಕ್ಕಳ ಇಲಾಖೆಯಿಂದ ಸೆಪ್ಟೆಂಬರ್ ಸೇರಿದಂತೆ ಮೂರು ತಿಂಗಳ ಅನುದಾನ ಅಂದರೆ ಒಟ್ಟು 7500 ಕೋಟಿ ಹಣ ಬಿಡುಗಡೆಗೆ ಪತ್ರ ಬರೆಯಲಾಗಿದೆ. ಆದರೆ ಒಟ್ಟಿಗೇ ಅಷ್ಟು ಹಣವನ್ನು ಇಲಾಖೆ ಒದಗಿಸುವುದು ಕಷ್ಟ ಎನ್ನಲಾಗಿದೆ. ಹೀಗಾಗಿ ಇದೇ ತಿಂಗಳೇ ಗೃಹಲಕ್ಷ್ಮಿ ಹಣ ಬಂದರೂ ಅದು ಒಂದು ತಿಂಗಳಿನದ್ದು ಆಗಿರಬಹುದಷ್ಟೇ ಎಂದೂ ತರ್ಕಿಸಲಾಗುತ್ತಿದೆ.

ಈ ಬಗ್ಗೆ ಸಚಿವೆ ಹೇಳಿದ್ದೇನು?: ಸರಿಯಾಗಿ ಆಯಾ ಕಂತಿನ ಹಣವನ್ನು ನಮ್ಮ ಇಲಾಖೆಗೆ ನೀಡಿದರೆ, ನಮಗೂ ಕೂಡ ಜನರಿಗೆ ಹಣ ಹಾಕಲು ಸಾಧ್ಯವಾಗುತ್ತದೆ. ಈ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದು, ಹಣ ಕೊಡುವುದಾಗಿ ಹೇಳಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಗೃಹಲಕ್ಷ್ಮಿ ಒಂದು ಮಹತ್ವಾಕಾಂಕ್ಷಿ ಯೋಜನೆ. ದುಡ್ಡಿನ ಸಮಸ್ಯೆ ಕಾಡುತ್ತಿಲ್ಲ. ವಿರೋಧ ಪಕ್ಷಗಳು ತಮ್ಮ ಅಧಿಕಾರದ ಅವಧಿಯಲ್ಲಿ ಅವೈಜ್ಞಾನಿಕವಾಗಿ ಕೆಲಸಗಳಿಗೆ ಹಣ ಹಂಚಿದ್ದರಿಂದ, ಈಗ ಸಮಸ್ಯೆಯಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಸಾಕಷ್ಟು ಜನರಿಗೆ ಅನುಕೂಲ ಆಗಿದ್ದು ತುಂಬ ಖುಷಿ ಆಗುತ್ತಿದೆ ಎಂದಿದ್ದಾರೆ.

ಅ.1 ಕ್ಕೆ ಪಡಿತರ ವಿತರಕರ ಸಂಘ ಸಭೆ

» ಬೆಂಗಳೂರು

ಹಣ ಬದಲು 5 ಕೆಜಿ ಅಕ್ಕಿ ನೀಡುವುದು,ಬಾಕಿ ಉಳಿದ ಇಕೆವೈಸಿ ಹಣ ಬಿಡುಗಡೆ ಸೇರಿ ಮಾಲೀಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಚರ್ಚೆ ನಡೆಸಿ ಸರ್ಕಾರ ವಿರುದ್ಧ ಹೋರಾಟದ ರೂಪುರೇಷಗಳನ್ನು ಸಿದ್ಧಪಡಿಸುವ ಸಲುವಾಗಿ ರಾಜ್ಯ ಸರ್ಕಾರಿ ಪಡಿತರ ವಿತರಕರ ಸಂಘ, ಮಂಗಳವಾರ (ಅ.1) ಬೆಳಗ್ಗೆ 10.30ಕ್ಕೆ ಖಾಸಗಿ ಹೋಟೆಲ್‌ನಲ್ಲಿ ತುರ್ತು ಸಭೆ ಕರೆದಿದೆ.

ರಾಜಕಾರಣದಲ್ಲಿ ಡಿಸೆಂಬರ್‌ಗೆ ಭಾರೀ ಸಂಚಲನ

» ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಸುನಾಮಿಯ ಮುನ್ಸೂಚನೆ ಕಾಣಿಸುತ್ತಿದೆ. ಕಾಂಗ್ರೆಸ್–ಬಿಜೆಪಿಗಳೆರಡರಲ್ಲೂ ರಾಜಕೀಯ ಧ್ರುವೀಕರಣ ನಡೆಯುವುದು ಬಹುತೇಕ ಖಚಿತವಾಗಿದೆ. ವರ್ಷಾಂತ್ಯದ ತಿಂಗಳಾದ ಡಿಸೆಂಬರ್ ಕೆಲವು ರಾಜಕೀಯಕ್ಕೆ ಅಂತ್ಯ ಹಾಡಿದರೆ, ಮತ್ತಷ್ಟು ರಾಜಕೀಯ ಚಟುವಟಿಕೆಗೆ ಆರಂಭವೂ ಡಿಸೆಂಬರ್‌ನಲ್ಲೇ ಆಗುವುದು ಬಹುತೇಕ ನಿಶ್ಚಿತವಾಗಿದೆ.

ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ನಿವೇಶನ ಪ್ರಕರಣದ ಕುರಿತು ಅಂತಿಮ ವರದಿ ಸಲ್ಲಿಸಲು ಡಿಸೆಂಬರ್ ಗಡುವು ನೀಡಿದೆ. ಇಲ್ಲಿಯ ತನಕ ಸಿದ್ದರಾಮಯ್ಯ ಜೊತೆಗೆ ನಿಂತಿದ್ದ ಇಡೀ ಕಾಂಗ್ರೆಸ್ ಒಳಗಡೆ ಇದೀಗ ಸಣ್ಣ ಪಿಸು ಪಿಸು ಆರಂಭವಾಗಿದೆ. ಇದರ ಮುಂದುವರೆದ ಭಾಗವಾಗಿ ಮಾಜಿ ಸಚಿವ, ಮಾಜಿ ಸ್ಪೀಕರ್ ಕೆ.ಬಿ. ಕೋಳಿವಾಡ ಮುಖ್ಯಮಂತ್ರಿ ವಿರುದ್ಧ ಮಾತನಾಡಿದ್ದಾರೆ. ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಇತ್ತ ಬಿಜೆಪಿ ಪಾಳೆಯದಲ್ಲಿ ಆಗಲೇ ಕುದಿಯುತ್ತಿರುವ ಬೇಗುದಿಯೂ ಡಿಸೆಂಬರ್‌ನಲ್ಲೇ ಸ್ಫೋಟಿಸುವ ಇಲ್ಲದೇ ನಾಯಕತ್ವ ಬದಲಿಸುವ ಕಾರ್ಯವೂ ಡಿಸೆಂಬರ್‌ನಲ್ಲೇ ಆಗುವ ಲಕ್ಷಣಗಳಿವೆ. ನವೆಂಬರ್15ಕ್ಕೆ ರಾಜ್ಯಾಧ್ಯಕ್ಷ ರಾಗಿ ವಿಜಯೇಂದ್ರ ಒಂದು ವರ್ಷ ಪೂರೈಸುತ್ತಿದ್ದಾರೆ. ಡಿಸೆಂಬರ್‌ನಲ್ಲೇ ಬಿಜೆಪಿ ರಾಷ್ಟ್ರಾಧ್ಯಕ್ಷರ ಬದಲಾವಣೆಯೂ ಇದೆ. ಇದೇ ಸಂದರ್ಭ ಬಳಸಿ ಭಿನ್ನಮತದ ಹಿನ್ನೆಲೆಯಲ್ಲಿಡಿಸೆಂಬರ್‌ನಲ್ಲೇವಿಜಯೇಂದ್ರ ಅವರನ್ನು ಬದಲಿಸುತ್ತಾರೆ ಎಂಬ ಮಾತು ಬಿಜೆಪಿಯಲ್ಲಿ ದಟ್ಟವಾಗಿದೆ. ಮುನಿಸಿಗೆ ಮದ್ದೆರೆಯಲು ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರೆಸ್ಸೆಸ್) ಮಧ್ಯಸ್ಥಿಕೆ ವಹಿಸಿದರೂ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದದ ಅಸಮಾಧಾನ ಶಮನವಾಗಿಲ್ಲ.

ಒಂದು ಕಡೆ ಪಕ್ಷದಿಂದ ಹೊರಗಿರುವ ಕೆ.ಎಸ್ ಈಶ್ವರಪ್ಪ, ರಾಯಣ್ಣ ಚೆನ್ನಮ್ಮ ಬ್ರಿಗೇಡ್ ಕಟ್ಟಲು ಸಭೆ ನಡೆಸುತ್ತಿ ದ್ದಾರೆ. ಮತ್ತೊಂದು ಕಡೆ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ ತಂಡವು ಸಭೆ ನಡೆಸುವುದನ್ನು ನಿಲ್ಲಿಸಿಲ್ಲ. ಗುರುವಾರ ಸರ್ಕಾರದ ವಿರುದ್ಧ ನಡೆದ ಪ್ರತಿಭಟನೆಯಲ್ಲಿ ರಾಜ್ಯಾಧ್ಯಕ್ಷ ವಿಜಯೇಂದ್ರ ಭಾಗವಹಿಸಿಲ್ಲ. ಮಾಧ್ಯಮಕ್ಕೆ ಮುಟ್ಟಿಸಿರುವ 'ಅನಾರೋಗ್ಯ ಕಾರಣ' ಎಂಬ ಮಾಹಿತಿ ಕೇವಲ ನೆಪ ಎಂಬುದು ಎಲ್ಲರಿಗೂ ಗೊತ್ತಾಗಿದೆ.

ಮತ್ತೊಂದು ಕಡೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ವಿರುದ್ಧ ಮತ್ತಷ್ಟು ಕೇಸುಗಳನ್ನು ದಾಖಲಿಸಿ, ವಿಜಯೇಂದ್ರ ಅವರನ್ನು ಹಿಮ್ಮೆಟ್ಟಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ತಂಡ ಚುರುಕಾಗಿ ಕೆಲಸ ಮಾಡುತ್ತಿದೆ. ಬಿ.ಎಸ್. ಯಡಿಯೂರಪ್ಪ ಅವರ ಮೇಲೆ ಕೇಸುಗಳನ್ನು ದಾಖಲಿಸಿ ವಿಜಯೇಂದ್ರ ಕಟ್ಟಿ ಹಾಕುವ ಜೊತೆಗೆ ಬಿಜೆಪಿ ಒಳಗೆ ಬಿರುಕು ಮೂಡಿಸುವ ಸರ್ಕಾರದ ತಂತ್ರ ಯಶಸ್ವಿಯಾಗುವ ಲಕ್ಷಣಗಳು ದಟ್ಟವಾಗಿವೆ. ಸದ್ಯಕ್ಕೆ ಭಿನ್ನಮತೀಯ ಚಟುವಟಿಕೆ ಕಾಂಗ್ರೆಸ್ಗಿಂತ ವಿಪಕ್ಷವಾಗಿರುವ ಬಿಜೆಪಿಯಲ್ಲೇ ಜೋರಿದ್ದರೂ ಡಿಸೆಂಬರ್ ಹೊತ್ತಿಗೆ ಕಾಂಗ್ರೆಸ್ ಒಳಗೂ ಭಿನ್ನರಾಗ ತಾರಕಕ್ಕೇರಲಿದೆ ಎಂದು ಕಾಂಗ್ರೆಸ್ ಮೂಲಗಳು ಖಚಿತಪಡಿಸುತ್ತಿವೆ.

ಸಿದ್ದರಾಮಯ್ಯ ಜೊತೆಗೆ ಹೈಕಮಾಂಡ್ ಇದೆ ಎಂಬ ಕಾರಣಕ್ಕೆ ಭಿನ್ನಮತ ಬಹಿರಂಗಕ್ಕೆ ಬರುವುದು ತಡವಾಗುತ್ತಿದೆ. ಹೈಕಮಾಂಡ್‌ಗೆ ಅರಿವು ಮಾಡಿಸುವ ತಂಡವೊಂದು ರೆಡಿಯಾಗುತ್ತದೆ. ಡಿಸೆಂಬರ್‌ಹೊತ್ತಿಗೆ ಇದಕ್ಕೆ ಶಕ್ತಿ ಬರಲಿದೆ ಎನ್ನಲಾಗಿದೆ. ಸ್ವಪಕ್ಷೀಯರಿಂದ ಭಿನ್ನಮತ ಎದುರಿಸುವ ಸಿಎಂ ಸಿದ್ದರಾಮಯ್ಯ ಮತ್ತು ವಿಜಯೇಂದ್ರ ಅವರ ಮುಂದಿನ ನಡೆ ಏನಾಗಬಹುದು ಎಂಬ ಕುತೂಹಲವಿದೆ.

ಏನೇ ಎದುರಾದರೂ ಇಬ್ಬರೂ ಸುಮ್ಮನೆ ಸೋಲೊಪ್ಪಿ ಕೂರುವ ಜಾಯಮಾನದವರಲ್ಲ. ಈ ಹಿನ್ನೆಲೆಯಲ್ಲಿ ಈ ವರ್ಷಾಂತ್ಯದ ಡಿಸೆಂಬರ್ ನಲ್ಲಿ ರಾಜ್ಯ ರಾಜಕಾರಣವು ಕೆಲವು ಅಂತ್ಯ ಮತ್ತು ಆರಂಭಗಳಿಗೆ ರಾಜ್ಯ ಸಾಕ್ಷಿಯಾಗುವುದು ಬಹುತೇಕ ನಿಚ್ಚಳವಾಗಿದೆ.

ಕಾಂಗ್ರೆಸ್ ಟೆನ್ಷನ್

- ಸಿಎಂ ಸಿದ್ದರಾಮಯ್ಯ ವಿರುದ್ಧದ ಮುಡಾ ವರದಿ ಸಲ್ಲಿಕೆಗೆ ಕೋರ್ಟ್ ಡಿಸೆಂಬರ್ ಗಡುವು ನೀಡಿದೆ
- ಇಲ್ಲಿಯವರೆಗೆ ಸಿದ್ದರಾಮಯ್ಯ ಜತೆಗೇ ಇದ್ದ ಕಾಂಗ್ರೆಸ್ಸಿಗರಲ್ಲಿ ಸಣ್ಣದಾಗಿ ಪಿಸುಪಿಸು ಶುರುವಾಗಿದೆ . ಅದರ ಭಾಗವಾಗಿ ಮಾಜಿ ಸ್ಪೀಕರ್ ಕೆ.ಬಿ.ಕೋಳಿವಾಡ ಅವರು ಸಿಎಂ ರಾಜೀನಾಮೆಗೆ ಆಗ್ರಹಿಸಿದ್ದಾರೆ
- ಸಿದ್ದರಾಮಯ್ಯ ಜತೆಗೆ ಹೈಕಮಾಂಡ್ ಇದೆ ಎಂಬ ಕಾರಣಕ್ಕೆ ಭಿನ್ನಮತ ಬಹಿರಂಗಕ್ಕೆ ಬರಲು ವಿಳಂಬ
- ಹೈಕಮಾಂಡ್‌ಗೆ ಅರಿವು ಮೂಡಿಸಲು ಕಾಂಗ್ರೆಸ್ಸಿನೊಳಗೆ ಈಗಾಗಲೇ ತಂಡವೊಂದು ಸಿದ್ಧವಾಗುತ್ತಿದೆ
- ಡಿಸೆಂಬರ್ ಹೊತ್ತಿಗೆ ಆ ಚಟುವಟಿಕೆಗಳಿಗೆ ಮತ್ತಷ್ಟು ಶಕ್ತಿ ಬರುವ ಸಾಧ್ಯತೆ ಇದೆ ಎಂಬ ಚರ್ಚೆ ಇದೆ.

ಬಿಜೆಪಿಯೊಳಗೆ ಬೇಗುದಿ

- ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾಗಿ ನವೆಂಬರ್ 15ಕ್ಕೆ ಒಂದು ವರ್ಷ ಪೂರ್ಣಗೊಳ್ಳಲಿದೆ
- ವಿಜಯೇಂದ್ರ ಅವರ ವಿರುದ್ಧ ಆಂತರಿಕ ಬೇಗುದಿ ಡಿಸೆಂಬರ್‌ನಲ್ಲೇ ಸ್ಫೋಟಗೊಳ್ಳುವ ಸಾಧ್ಯತೆ ಇದೆ
- ಡಿಸೆಂಬರ್‌ಗೆ ಬಿಜೆಪಿ ರಾಷ್ಟ್ರಾಧ್ಯಕ್ಷರ ಬದಲಾವಣೆ. ಆಗ ಬಿವೈವಿ ಬದಲಾವಣೆ ಆಗ್ತಾರೆ ಎಂಬ ಚರ್ಚೆ
- ಬಿಎಸ್‌ವೈ ವಿರುದ್ಧ ಮತ್ತಷ್ಟು ಕೇಸ್ ದಾಖಲಿಸಿ ವಿಜಯೇಂದ್ರ ಹಿಮ್ಮೆಟ್ಟಿಸಲು ಸಿದ್ದು ತಂಡ ಸಕ್ರಿಯ.ಈ ಮೂಲಕ ವಿಜಯೇಂದ್ರ ಕಟ್ಟಿ ಹಾಕುವ ಜೊತೆಗೆ ಬಿಜೆಪಿಯಲ್ಲಿ ಬಿರುಕು ಮೂಡಿಸಲು ಸರ್ವ ಪ್ರಯತ್ನ
- ಸರ್ಕಾರದ ವಿರುದ್ಧ ಬಿಜೆಪಿ ನಡೆಸಿದ ಪ್ರತಿ ಭಟನೆಯಿಂದ ಬಿವೈವಿ ದೂರ ಉಳಿದ ಬಗ್ಗೆ ಚರ್ಚೆ

ಸಂಸ್ಕಾರವಿಲ್ಲದ ಶಿಕ್ಷಣ ಮುಂದಿನ ಭವಿಷ್ಯಕ್ಕೆ ಮಾರಕ!

» ಹೊಸದುರ್ಗ

ನಿಮ್ಮ ತಂದೆ ತಾಯಿಗಳು ಉತ್ತಮವಾದ ಶಿಕ್ಷಣವನ್ನ ಕೊಡಿಸಿದ್ದಾರೆ ವಿದ್ಯಾವಂತರಾದ ನೀವುಗಳು ಸಂಸ್ಕಾರ ಮತ್ತು ಸಂಸ್ಕೃತಿ ಎರಡನ್ನೂ ಕೂಡ ಶಿಕ್ಷಣದ ಜೋತೆ ಜೋತೆಯಲ್ಲಿ ತಗೆದುಕೊಂಡು ಹೋಗಬೇಕು, ಸಂಸ್ಕೃತಿ ಮತ್ತು ಸಂಸ್ಕಾರವನ್ನು ಇಟ್ಟುಕೊಂಡು ಶಿಕ್ಷಣವನ್ನ ಕಲಿತರೆ ಮುಂದೆ ಜೀವನದಲ್ಲಿ ಮುಂದೆ ಬರಲು ಸಾಧ್ಯ, ಸಂಸ್ಕೃತಿ ಮತ್ತು ಸಂಸ್ಕಾರವಿಲ್ಲದ ಶಿಕ್ಷಣ ಮುಂದೆ ನಿಮ್ಮ ಭವಿಷ್ಯಕ್ಕೆ ಮಾರಕವಾಗುತ್ತದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕಿವಿ ಮಾತು ಹೇಳಿದರು.

ಪಟ್ಟಣದ ಯಾಲಕ್ಕಿನಗರದಲ್ಲಿರುವ ಇಂದಿರಾಗಾಂಧಿ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜು, ಕನಕ ವಿದ್ಯಾ ಸಂಸ್ಥೆಯ ಆವರಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಮೂರು ವರ್ಷಗಳ ಕಾಲ ಶಿಕ್ಷಣ ಪಡೆದು ಹೊರಹೋಗುತ್ತಿರುವ ನರ್ಸಿಂಗ್ ವಿದ್ಯಾರ್ಥಿಗಳ ಬೀಳ್ಕೊಡಿಗೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನ ಉದ್ಘಾಟಿಸಿ ಮಾತನಾಡಿದರು.

ತಂದೆ ತಾಯಿಗಳು ತಮ್ಮ ಮಕ್ಕಳ ಭವಿಷ್ಯ ರೂಪಿಸುವ ಸಲುವಾಗಿ ಕೂಲಿ ನಾಲಿ ಮಾಡಿ ದೇಶದ ಸಂಪತ್ತು ಮನೆಯ ಸಂಪತ್ತು ಎಲ್ಲವನ್ನೂ ಸಹಾ ವೃದ್ದಿಸಿಕೊಂಡು ಹೋಗಬೇಕೆಂಬ ಮಹಾದಾಸೆಯಿಂದ ನಿಮ್ಮನ್ನ ಶಾಲಾ ಕಾಲೇಜಿಗೆ ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಕಳುಹಿಸುತ್ತಾರೆ ನೀವು ದಾರಿ ತಪ್ಪು ಕೆಲಸ ಮಾಡಬಾರದು ಎಂಬ ಎಚ್ಚರಿಕೆಯ ಮಾತುಗಳನ್ನ ಆಡಿದರು.

ಖಾಸಗಿಶಾಲಾಕಾಲೇಜುಗಳನ್ನನಡೆಸುಂತಹದ್ದು ತುಂಭಾ ಕಷ್ಟದ ಕೆಲಸ ಅದರಲ್ಲೂ ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಕಷ್ಟ, ಇಂತಹ ಬಿಕ್ಕಟ್ಟಿನ ಪರಿಸ್ಥಿತಿಯಲ್ಲೂ ಕೂಡ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಈ ಸಂಸ್ಥೆಯ ಸಂಸ್ಥಾಪರಾದ ಡಾ: ಎಂ.ಹೆಚ್.ಕೃಷ್ಣ ಮೂರ್ತಿಯವರು ಕಳೆದ 22 ವರ್ಷಗಳಿಂದ ಗ್ರಾಮೀಣ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ, ಹಾಗೂ ಉತ್ತಮವಾದ ಶಿಕ್ಷಣವನ್ನ ಕೊಡುವ ನಿಟ್ಟಿನಲ್ಲಿ ಸರ್ವ ಪ್ರಯತ್ನಗಳನ್ನೂ ಸಹಾ ನಡೆಸಿದ್ದಾರೆ ಅವರ ಪ್ರಯತ್ನದ ಫಲವಾಗಿ ಸಂಸ್ಥೆ 22 ನೇ ವರ್ಷದಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ ಎಂದರು.

ಕನಕ ವಿದ್ಯಾ ಸಂಸ್ಥೆಯ ಗೌರವಾಧ್ಯಕ್ಷ ಡಾ: ಎಂ.ಹೆಚ್.ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಅಜ್ಜಂಪುರ ಕ್ಷೇತ್ರದ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಕೃಷ್ಣಮೂರ್ತಿ, ಕನಕ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಶ್ರೀಮತಿವೀಣಾಕೃಷ್ಣಮೂರ್ತಿ, ಕೆ.ಪಿ.ಸಿ.ಸಿ ಸದಸ್ಯರುಗಳಾದ ಎಂ.ಪಿ.ಶಂಕರ್, ಅಲ್ತಾಫ್‌ಪಾಷಾ,ಮಾಜಿ ಪುರಸಭಾ ಸದಸ್ಯ ಅಗ್ರೋ ಶಿವಣ್ಣ, ಕಂಗುವಳ್ಳಿ ಗ್ರಾಪಂಅಧ್ಯಕ್ಷ ರಾಮಣ್ಣ, ಸರ್ಕಾರಿ ಆಸ್ಪತ್ರೆಯ ವೈದ್ಯ ಡಾ: ಸಂಜಯ್, ಯು. ಎಸ್,ಉದ್ಯಮಿಪ್ರಸನ್ನಕುಮಾರ್,ಇಂದಿರಾಗಾಂಧಿ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿಲಾವ 'ಣ್ಯ ಕೆ.ಜಿ, ರಂಗನಾಥ ಪಿ.ಯು ಕಾಲೇಜಿನ ಪ್ರಾಂಶುಪಾಲ ಮಾರುತಿ, ಐಗಿರ್ ಶಾಲೆಯ ಪ್ರಾಂಶುಪಾಲ ಟಿ. ಸ್ವಾಮಿ, ಕನಕ ನೌಕರರ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಮಹಾಂತೇಶ್, ಕಾಂಗ್ರೇಸ್ ಯುವ ಮುಖಂಡ ವಸಂತ್, ಹಿನಾಯಿತ್ ಸೇರಿದಂತೆ ಕಾಲೇಜಿನ ಸಿಬ್ಬಂಧಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದ ನಂತರ ಕಾಲೇಜಿನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು



ಹೆಣ್ಣು ಮಕ್ಕಳಿಗೆ ನಮ್ಮ ನಾಡಿನಲ್ಲಿ ಸಂಸ್ಕೃತಿ,ಸಂಸ್ಕಾರ ಹಾಗೂ ಚೌಕಟ್ಟು ಕೂಡ ಇದೆ. ನಮ್ಮ ಸಮಾಜ ಹೆಣ್ಣು ಮಕ್ಕಳಿಗೆ ಚೌಕಟ್ಟು ಮಾಡಿದೆ ಆ ಚೌಕಣ್ಣಿನ ಒಳಗೆ ಇದ್ದು ನಡೆದುಕೋಂಡು ಹೋದರೆ ಹೆಣ್ಣು ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ. ಚೌಕಣ್ಣಿನ ಹಾದಿಯನ್ನ ದಾಟಿ ಮುಂದೆ ಹೋದರೆ ನಿಮ್ಮ ಹಾದಿ ಸುಗಮವಾಗಿರುವುದಿಲ್ಲ, ತಂದೆ ತಾಯಿಗಳು ನಿಮ್ಮನ್ನು ಮಧುವೆ ಮಾಡಿ ಕಳುಹಿಸುವವರೆಗೂ ಕಾದು ಇದ್ದು ಅವರ ಆಶೀರ್ವಾದ ಪಡೆದು ಹೋಗಿ ಆಗ ನಿಮ್ಮ ಭವಿಷ್ಯ ಉಜ್ವಲವಾಗಿರುತ್ತದೆ.

» ಬಿ.ಜಿ.ಗೋವಿಂದಪ್ಪ, ಶಾಸಕರು

ಪರೀಕ್ಷಾ ಪ್ರಾಧಿಕಾರದವತಿಯಿಂದ ಗ್ರಾಮ ಆಡಳಿತಾಧಿಕಾರಿಗಳ ಹುದ್ದೆಗಾಗಿ ಸ್ಪಧಾತ್ಮಕ ಪರೀಕ್ಷೆ ಇಂದು

» ಚಳ್ಳಕೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದವತಿಯಿಂದ ಗ್ರಾಮ ಆಡಳಿತಾಧಿಕಾರಿಗಳ ಆಯ್ಕೆಗಾಗಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಗರದ ಆರು ಕೇಂದ್ರಗಳಲ್ಲಿ ಸೆ.29ರ ಭಾನುವಾರ ನಡೆಸಲಾಗುವುದು ಎಂದು ಪರೀಕ್ಷೆಯ ಮೇಲುಸ್ತುವಾರಿ ಅಧಿಕಾರಿ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಈ ಬಗ್ಗೆ ಮಾಹಿತಿ ನೀಡಿ, ಪರೀಕ್ಷೆಯ ಮೇಲುಸ್ತುವಾರಿ ತಹಶೀಲ್ದಾರ್ ರೇಹಾನ್‌ಪಾಷ ಸಹಯೋಗದೊಂದಿಗೆ ನಡೆಸಲಾಗುತ್ತದೆ. ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಡೆಸುವ ನಿಟ್ಟಿನಲ್ಲಿ ತಹಶೀಲ್ದಾರ್ ರೇಹಾನ್